ಸಂಪುಟ : 9 ಸಂಚಿಕೆ 39 ಪುಟ : 4 ಬೆಲೆ: 3.00 ಸೋಮವಾರ ಮಾರ್ಚ್ 11, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 39 Pages : 4 Price : 3.00 Monday March 11 2024 Gadag RNI No:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಡಂಬಳ ಹೋಬಳಿಯ ಡೋಣಿ ಗ್ರಾಮದಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

ಕೇಂದ್ರದ ಬಿಜೆಪಿ ಯುವಕರನ್ನು ಯಾಮಾರಿಸಿದೆ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರತೀ ವರ್ಷ 2 ಕೋಟಿ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವದಾಗಿ ಭರವಸೆ ನೀಡಿದ್ದ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕೊಟ್ಟ ಮಾತಿನಂತೆ ನಡೆದುಕೊಳ್ಳದೆ ಯುವಕರನ್ನು ಯಾಮಾರಿಸಿದ್ದಾರೆ. ಇಂತಹ ವಚನಭ್ರಷ್ಟ ಸರ್ಕಾರವನ್ನು ಮತ್ತೆ ಕೇಂದ್ರದಲ್ಲಿ ಅಧಿಕಾರಕ್ಕೆ ತರಬೇಡಿ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಡೋಣಿ ಗ್ರಾಮದಲ್ಲಿ ವಿವಿಧ ಯೋಜನೆಗಳಡಿ ಕರ್ನಾಟಕ ಪಬ್ಲಿಕ್ ಸ್ಕೂಲ್ ಕಟ್ಟಡದ ಗುದ್ದಲಿ ಪೂಜೆ, ಸರ್ಕಾರಿ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯಿಂದ ಮುಖ್ಯ ರಸ್ತೆಯವರೆಗೆ ಸಿ.ಸಿ. ರಸ್ತೆ, ಗ್ರಂಥಾಲಯ ಕಟ್ಟಡ ಉದ್ಘಾಟನೆ, ಶ್ರೀ ಸದ್ಗುರು ಹಾಲೇಶ್ವರ ಆಶ್ರಮದ ಆವರಣದಲ್ಲಿ ಯಾತ್ರಿ ನಿವಾಸ ಕಟ್ಟಡದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ನೇತೃತ್ವದ ರಾಜ್ಯ ಸರ್ಕಾರದಿಂದ ಶಾಲಾ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಆದ್ಯತೆ ನೀಡುವ ಮೂಲಕ ಶೈಕ್ಷಣಿಕ ರಂಗಕ್ಕೆ ಶಕ್ತಿ ತುಂಬಿ, ದೇಶದ ಶಕ್ತಿಯನ್ನು ಹೆಚ್ಚಿಸುವ ಕಾರ್ಯ ಕೈಗೊಳ್ಳುತ್ತಿದೆ ಎಂದು ಹೇಳಿದರು.

ಮುಂಡರಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಡಿ. ಮೋರನಾಳ, ರೋಣ ಪುರಸಭೆ ಉಪಾಧ್ಯಕ್ಷ ಮಿಥುನ ಜಿ.ಪಾಟೀಲ್ ಮಾತನಾಡಿ, ರಾಜ್ಯದಲ್ಲಿ ಕಡುಬಡವರಿಗೆ, ಕಾರ್ಮಿಕರಿಗೆ, ರೈತರಿಗೆ, ಮಹಿಳೆಯರಿಗೆ ಗ್ಯಾರಂಟಿ ಯೋಜನೆಗಳನ್ನು ನೀಡುವುದರ ಮೂಲಕ ಒಂದು ವರ್ಷದಲ್ಲಿ ಒಂದು ಕುಟುಂಬಕ್ಕೆ 45 ಸಾವಿರ ರೂ ಹಣ ವರ್ಗಾವಣೆಯಾಗುತ್ತಿದೆ. ಬಡವರ ಪರ ಕಾಳಜಿ ವಹಿಸಿರುವ ಕಾಂಗ್ರೆಸ್ ಸರ್ಕಾರಕ್ಕೆ ಜನರು ಬರುವ ಎಲ್ಲಾ ಚುನಾವಣೆಗಳಲ್ಲಿ ರಾಜಕೀಯ ಶಕ್ತಿ ತುಂಬಲು ಬೆಂಬಲವಾಗಿರಬೇಕೆಂದು ಮನವಿ ಮಾಡಿದರು.

> ಹತ್ತು ವರ್ಷದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ರೈತರ ಸಾಲ ಮನ್ನಾ ಮಾಡಿಲ್ಲವಾದರೂ, ಶ್ರೀಮಂತರ 10 ಲಕ್ಷ ಕೋಟಿ ರೂ. ಸಾಲವನ್ನು ಮನ್ನಾ ಮಾಡುವ ಮೂಲಕ ಕೇಂದ್ರ ಸರ್ಕಾರ ಬಡವರ ಪರವಲ್ಲ, ಬಂಡವಾಳಶಾಹಿಗಳ ಪರ ಎಂಬುದನ್ನು ಸಾಬೀತು ಮಾಡಿದೆ. ಆದರೆ, ಕೇಂದ್ರದಲ್ಲಿ ಮನಮೋಹನ ಸಿಂಗ್ ಪ್ರಧಾನಿಯಾಗಿದ್ದಾಗ ದೇಶಾದ್ಯಂತ ಎಲ್ಲಾ ಹಂತದ ರೈತರ ಸಾಲ ಮನ್ನಾ ಮಾಡಿ ರೈತರ ಪರವಾಗಿ ನಿಂತಿದ್ದರು. ಇಂದು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ 5 ಗ್ಯಾರಂಟಿ ಯೋಜನೆಗಳನ್ನು ಕೊಟ್ಟು ಮಾತಿನಂತೆ ಜಾರಿಗೊಳಿಸಿ, ಜನಪರ ಸರ್ಕಾರವೆನಿಸಿದೆ.
>
> – ಜಿ.ಎಸ್. ಪಾಟೀಲ.
> ಶಾಸಕರು, ಖನಿಜ ನಿಗಮದ ಅಧ್ಯಕ್ಷರು.

ಸಾನಿಧ್ಯ ವಹಿಸಿದ್ದ ಶ್ರೀ ಅಮೃತೇಶ್ವರ ಹಾಲಸೋಮೇಶ್ವರ ಶ್ರೀಗಳು ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ರಾ.ಪಂ ಅಧ್ಯಕ್ಷೆ ಲಲಿತಾ ಕುಂಬಾರ, ಉಪಾಧ್ಯಕ್ಷೆ ನಾಗರತ್ನ ವಡ್ಡರ, ಗೋಣಿಬಸಪ್ಪ ಕೊರ್ಲಹಳ್ಳಿ, ಶಾಂತವೀರಗೌಡ ಹೊಸಮನಿ, ಜಗದೀಶ ಮೈನಳ್ಳಿ, ಗುರಣ್ಣ ಕುರ್ತುಕೋಟಿ, ನಾಗರಾಜ ಸಜ್ಜನರ, ಬಿ.ಎಸ್. ಕೆರಿ, ಈಶಣ್ಣ ಓಲಿ, ಮಳ್ಳಪ್ಪ ಜೋಂಡಿ, ಒಂಟೆಲ್ಲಪ್ಪ ಒಡ್ಡರ, ಕಾಶಪ್ಪ ಅಳವುಂಡಿ, ಈರಪ್ಪ ಯಳವತ್ತಿ, ಬಸುರಾಜ ಪೂಜಾರ, ರಾಮಣ್ಣ ಮೇಗಲಮನಿ, ಭರಮಪ್ಪ ಕಿಲಾರಿ, ಪರಸುರಾಮ ಒಡ್ಡರ, ತಹಸೀಲ್ದಾರ ಧನಂಜಯ ಮಾಲಗಿತ್ತಿ, ಇಓ ವಿಶ್ವಾನಾಥ ಹೋಸಮನಿ, ಪಿಡಬ್ಲ್ಯುಡಿಯ ನಾಗೇಂದ್ರ ಪಟ್ಟಣಶೆಟ್ಟರ, ಡಿಡಿಪಿಐ ಎಮ್.ಎ. ರಡ್ಡೇರ, ಸಮಾಜ ಕಲ್ಯಾಣ ಅಧಿಕಾರಿ ಉದಯಕುಮಾರ ಯಲಿವಾಳ, ಎಚ್.ಎಮ್. ಪಡ್ನೆಸ್, ಗಂಗಾದರ ಅಣ್ಣಿಗೇರಿ ಸೇರಿದಂತೆ ಗ್ರಾಮದ ಹಿರಿಯರು, ಯುವಕರು ಇದ್ದರು.

ಅಂತಾರಾಷ್ಟ್ರೀಯ ಸಮ್ಮೇಳನ ಮಾ.12, 13ಕ್ಕೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಾ-ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಇದೇ ಪ್ರಥಮ ಬಾರಿಗೆ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನದಲ್ಲಿ ಸಂಶೋಧನಾ ಪ್ರವೃತ್ತಿ ಕುರಿತು ಅಂತಾರಾಷ್ಟ್ರೀಯ ಸಮ್ಮೇಳನ ಮಾ.12 ಮತ್ತು 13ರಂದು ಜರುಗಲಿದೆ ಎಂದು ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ ತಿಳಿಸಿದ್ದಾರೆ.

ಚಿಕಾಗೋದ ಇಲಿಯಾನ್ಸ್ ವಿಶ್ವ ವಿದ್ಯಾಲಯದ ಡಾ. ಕೃಷ್ಣಾರೆಡ್ಡಿ ಸಮ್ಮೇಳನ ಉದ್ಘಾಟಿಸುವರು. ಧಾರವಾಡ ಐಐಟಿಯ ಡಾ. ಎಸ್. ಆರ್ ಮಹಾದೇವ ಪ್ರಸನ್ನ, ಬೆಂಗಳೂರಿನ ಟೆಕ್ನೊ ಪಾರ್ಕೂನ್‌ನ ಮಲ್ಲಿಕಾರ್ಜುನ ಕುಲಕರ್ಣಿ ಅತಿಥಿಗಳಾಗಿ ಆಗಮಿಸುವರು. ಡಾ. ರಾಜಶೇಖರ ಕುನಬೇವು, ಡಾ. ಸ್ವಪ್ನಾ ಚನ್ನಗೌಡರ ಸೇರಿ ಅನೇಕರು ಉಪಸ್ಥಿತರಿರುವರು. ಈ ವೇಳೆ ಇಲೆಕ್ಟ್ರಾನಿಕ್ಸ್, ಕಂಪ್ಯೂಟರ್ ಸೈನ್ಸ್, ಭೌತಶಾಸ್ತ್ರ, ಗಣಿತಶಾಸ್ತ್ರ ವಿವಿಧ ವಿಷಯಗಳ 100ಕ್ಕೂ ಹೆಚ್ಚು ವಿಷಯ ತಜ್ಞರು ಪ್ರಬಂಧ ಮಂಡನೆ ಮಾಡಲಿದ್ದಾರೆ ಎಂದು ತಿಳಿಸಿದ್ದಾರೆ.

ಮಾ.12ರಂದು ಸರಕಾರದ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ

ಅಧಿಕಾರಿಗಳಿಂದ ಸಮಾವೇಶ ಸ್ಥಳ ಪರೀಶೀಲನೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಮಾ.12ರಂದು ಸರಕಾರದ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ನಡೆಯಲಿರುವ ಹಿನ್ನೆಲೆಯಲ್ಲಿ ಸಮಾವೇಶ ನಡೆಯುವ ಉಮಾ ವಿದ್ಯಾಲಯ ಹೈಸ್ಕೂಲ್ ಮೈದಾನವನ್ನು ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಅವರ ನೇತೃತ್ವದ ಅಧಿಕಾರಿಗಳ ತಂಡ ರವಿವಾರ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು.

ಮಾ12ರಂದು ಮದ್ಯಾಹ್ನ 3 ಗಂಟೆಗೆ ನಡೆಯುವ ಈ ಸಮಾವೇಶಕ್ಕೆ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳ ಸುಮಾರು 8–10 ಸಾವಿರ ಫಲಾನುಭವಿಗಳು ಸೇರಲಿದ್ದು, ಕಾರ್ಯಕ್ರಮಕ್ಕೆ ಗ್ರಾಮೀಣ ಪ್ರದೇಶಗಳಿಂದ ಬರುವ ಜನರಿಗೆ ವಾಹನ ವ್ಯವಸ್ಥೆ, ಸ್ಥಳದಲ್ಲಿ ಊಟ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಲಾಗಿದೆ.

ಈ ವೇಳೆ ಲಕ್ಷ್ಮೇಶ್ವರ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಶಿರಹಟ್ಟಿ ತಾ.ಪಂ ಇ.ಓ ನಿಂಗಪ್ಪ ಓಲೇಕಾರ, ಶಿರಹಟ್ಟಿ ತಹಸೀಲ್ದಾರ ಅನಿಲ ಬಡಿಗೇರ, ಸಿಪಿಐ ನಾಗರಾಜ ಮಾಡಳ್ಳಿ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಶಿರಹಟ್ಟಿ ಪ.ಪಂ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಪಿಎಸೈ ಈರಣ್ಣ ರಿತ್ತಿ, ಕಂದಾಯ ನಿರೀಕ್ಷಕ ಬಿ.ಎಂ. ಕಾತ್ರಾಳ ಹಾಜರಿದ್ದು, ವೇದಿಕೆ ಸಿದ್ಧತೆ, ವಾಹನ ನಿಲುಗಡೆ, ಊಟದ ವ್ಯವಸ್ಥೆ, ಕುಡಿಯುವ ನೀರು ಸೇರಿದಂತೆ ಕಾರ್ಯಕ್ರಮದ ಸಿದ್ಧತೆಗಳ ಕುರಿತು ಚರ್ಚಿಸಿ, ಪರಿಶೀಲನೆ ನಡೆಸಿದರು.

▸▸ 3ನೇ ಪುಟಕ್ಕೆ

ಶ್ರೀ ಮುಕ್ತಿಮಂದಿರ ಧರ್ಮ ಕ್ಷೇತ್ರದಲ್ಲಿ ಮಹಾಶಿವರಾತ್ರಿ ಅಂಗವಾಗಿ ಧರ್ಮ ಜಾಗೃತಿ ಸಮಾರಂಭ

ಮೌಢ್ಯ ಅಳಿದು, ಸ್ನೇಹ–ಸೌಜನ್ಯ ಬೆಳೆಯಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭೌತಿಕ ಬದುಕಿಗೆ ಸಂಪತ್ತಿನೊಂದಿಗೆ ಶಿವಜ್ಞಾನದ ಅರಿವು ಮುಖ್ಯ. ಸಂಸ್ಕಾರ ಮತ್ತು ಸಂಸ್ಕೃತಿ ಎಂಬ ಬೀಜ ಬಿತ್ತಿ ಜೀವನದಲ್ಲಿ ಸತ್ಫಲಗಳನ್ನು ಪಡೆಯಬೇಕು. ಜ್ಞಾನ ಕ್ರಿಯಾತ್ಮಕವಾದ ಧರ್ಮ ಪರಿಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ತಾಲೂಕಿನ ಶ್ರೀಮದ್ರಂಭಾಪುರಿ ಶಾಖಾ ಶ್ರೀ ಮುಕ್ತಿಮಂದಿರ ಧರ್ಮ ಕ್ಷೇತ್ರದಲ್ಲಿ ಮಹಾಶಿವರಾತ್ರಿ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಹಣ ಮತ್ತು ಅಧಿಕಾರದ ಬಗ್ಗೆ ಸದಾ ಚಿಂತಿಸುವ ಮನುಷ್ಯ ದೇಶ, ಸಂಸ್ಕೃತಿ ಮತ್ತು ಧರ್ಮದ ಬಗೆಗೆ ಚಿಂತಿಸಲಾರ. ಸಿರಿ ಸಂಪತ್ತು ಗಳಿಸಲು, ಉಳಿಸಲು ಬೇಕಾದಷ್ಟು ಸಮಯವಿದೆ. ಆದರೆ ಆಧ್ಯಾತ್ಮ ಸಾಧನೆಗೆ ಮತ್ತು ಭಗವಂತನ ಸ್ಮರಣೆಗೆ ಮಾತ್ರ ಸಮಯವಿಲ್ಲದ ಪರಿಸ್ಥಿತಿ ನಿರ್ಮಾಣಗೊಳ್ಳುತ್ತಿರುವುದು ನೋವಿನ ಸಂಗತಿ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಜೀವನದ ಮೌಲ್ಯಾಧಾರಿತ ವಿಚಾರಗಳನ್ನು ಅನುಸರಿಸಿ ಬಾಳಬೇಕಾಗುತ್ತದೆ. ತನಗಾಗಿ ಬಯಸುವುದು ಜೀವಗುಣ. ಎಲ್ಲರಿಗಾಗಿ ಬಯಸುವುದು ದೇವಗುಣ. ಅಂಥ ದೇವಗುಣಗಳ ಅಕ್ಷಯ ನಿಧಿ ಲಿಂ.ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಎಂಬುದನ್ನು ಯಾರೂ ಮರೆಯಬಾರದೆಂದರು.



ಸಮಾರಂಭ ಉದ್ಘಾಟಿಸಿದ ಹುಬ್ಬಳ್ಳಿಯ ಡಾ. ಎಸ್.ಪಿ. ಬಳಿಗಾರ ಮಾತನಾಡಿ, ಲಿಂ.ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ದೂರದೃಷ್ಟಿ ಮತ್ತು ವಿಶ್ವ ಬಂಧುತ್ವದ ಚಿಂತನೆಗಳು ನಮ್ಮೆಲ್ಲರ ಬಾಳಿಗೆ ದಾರಿದೀಪ. ಸಿದ್ಧಿ ಸಾಧನೆಯ ಮೇರು ಪರ್ವತದಂತಿದ್ದ ಜಗದ್ಗುರುಗಳು ಆಧ್ಯಾತ್ಮ ಜ್ಞಾನದ ಅರಿವು ಮೂಡಿಸಲು ಸದಾ ಶ್ರಮಿಸಿದ್ದನ್ನು ಮರೆಯಲಾಗದು. ಅವರು ತೋರಿದ ದಾರಿಯಲ್ಲಿ ನಡೆಯುವುದೇ ಅವರಿಗೆ ಅರ್ಪಿಸುವ ನಿಜವಾದ ಕೃತಜ್ಞತೆಯಾಗಿದೆ ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ ಮಾಜಿ ಶಾಸಕರಾದ ಕುಸುಮಾವತಿ ಸಿ.ಶಿವಳ್ಳಿ ಮಾತನಾಡಿ, ಭಾರತೀಯ ಸಂಸ್ಕೃತಿಗೆ ಮಹಿಳೆಯರು ಕೊಟ್ಟ ಕೊಡುಗೆ ಅಪಾರ. ಧರ್ಮದ ಆಚರಣೆಗೆ ಸತ್ಯ ಸಂಸ್ಕೃತಿ ಉಳಿಯಲು ಮಹಿಳೆಯರೇ ಕಾರಣರಾಗಿದ್ದಾರೆ. ಮಹಿಳೆ ಜಾಗೃತಗೊಂಡರೆ ಸಂಸ್ಕೃತಿ ಇನ್ನಷ್ಟು ಉಜ್ವಲಗೊಳ್ಳಲು ಸಾಧ್ಯವಾಗುವುದೆಂದರು.

ನೇತೃತ್ವ ವಹಿಸಿದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಆಧ್ಯಾತ್ಮ ಲೋಕದಲ್ಲಿ ಧ್ರುವ ನಕ್ಷತ್ರ. ಅವರ ಆದರ್ಶ ಜೀವನ, ಸಂದೇಶ ಭಕ್ತ ಸಂಕುಲಕ್ಕೆ ಆಶಾ ಕಿರಣ. ಅವರು ಸಂಕಲ್ಪಿಸಿದ ತ್ರಿಕೋಟಿ ಶಿವಲಿಂಗ ಪ್ರಾಣ ಪ್ರತಿಷ್ಠಾಪನೆಗೆ ಇದೀಗ ಕಾಲ ಕೂಡಿ ಬಂದಿದೆ ಎಂದು ಹರುಷ ವ್ಯಕ್ತಪಡಿಸಿದರು.

> ಜನ ಸಮುದಾಯದಲ್ಲಿ ತಾಳ್ಮೆ ಮತ್ತು ಸಹನೆಯ ಗುಣ ಇಲ್ಲದಿರುವುದೇ ಇಂದಿನ ಅಶಾಂತಿ ಅತೃಪ್ತಿಗಳಿಗೆ ಮೂಲ ಕಾರಣ. ಹಣತೆ ತನಗಾಗಿ ಉರಿಯದೇ ಪರರಿಗೆ ಬೆಳಕು ನೀಡುವಂತೆ ಮಹಾತ್ಮರು ತಮಗಾಗಿ ಏನನ್ನೂ ಬಯಸದೇ ಪರ ಹಿತಕ್ಕಾಗಿ ಸದಾ ಶ್ರಮಿಸುತ್ತಾರೆ. ನೆರಳು ನೀಡುವ ಮರ, ಹರಿಯುವ ನೀರು, ಬೀಸುವ ಗಾಳಿ ಮತ್ತು ನಮ್ಮೆಲ್ಲರನ್ನು ಹೊತ್ತ ನೆಲ ಪರೋಪಕಾರವನ್ನು ಎತ್ತಿ ತೋರಿಸುತ್ತವೆ. ನದಿಯ ನೀರನ್ನು ಎಷ್ಟು ತುಂಬಿದರೂ ಹೇಗೆ ಕಡಿಮೆ ಆಗುವುದಿಲ್ಲವೋ ಹಾಗೆಯೇ ಧರ್ಮದ ಅರಿವನ್ನು ಎಷ್ಟು ಅರಿತರೂ ಪೂರ್ಣವಾಗದು. ಜಾತಿ ಮತ್ತು ಮತೀಯ ಮೌಢ್ಯ ಅಳಿದು, ಸ್ನೇಹ–ಸೌಜನ್ಯ ಉಳಿದು ಬೆಳೆಯಬೇಕು.
>
> – ಡಾ. ವೀರಸೋಮೇಶ್ವರ ಜಗದ್ಗುರುಗಳು.
> ಶ್ರೀ ರಂಭಾಪುರಿ ಪೀಠ, ಬಾಳೆಹೊನ್ನೂರು.

ಸಮ್ಮುಖ ವಹಿಸಿದ ಬಂಕಾಪುರ ಅರಳೆಲೆ ಹಿರೇಮಠದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ವೀರಶೈವ ಧರ್ಮ ಮತ್ತು ಪರಂಪರೆ ಕುರಿತು ಉಪದೇಶಾಮೃತವನ್ನಿತ್ತರು. ಹಿರೇವಡ್ಡಟ್ಟಿ ವೀರೇಶ್ವರ ಶಿವಾಚಾರ್ಯರು, ಕಲಾದಗಿಯ ಗಂಗಾಧರ ಶಿವಾಚಾರ್ಯರು ಲಕ್ಷ್ಮೇಶ್ವರದ ಮಳೆಮಲ್ಲೇಶ್ವರ ಶಿವಾಚಾರ್ಯರು ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿದ ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮುಕ್ತಿ ಮಂದಿರ ಕ್ಷೇತ್ರದಲ್ಲಿ ಹಲವರು ಅಭಿವೃದ್ಧಿ ಕಾರ್ಯಗಳು ನಡೆಯುತ್ತಿದ್ದು, ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳವರ ತ್ರಿಕೋಟಿ ಶಿವಲಿಂಗ ಪ್ರತಿಷ್ಠಾಪನೆ ಕಾರ್ಯವನ್ನು ಎಲ್ಲರೂ ಸೇರಿ ಪೂರ್ಣಗೊಳಿಸುವ ಸತ್ಯ ಸಂಕಲ್ಪ ಕೈಗೊಳ್ಳಬೇಕೆಂದರು.

ಸಮಾರಂಭದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದ್ದೇವರಮಠ, ಗಂಗಣ್ಣ ಮಹಂತಶೆಟ್ರ, ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

ತೋಂಟದಾರ್ಯ ಮಠದಲ್ಲಿ 'ಶಿವಾನುಭವ' ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗಾಯತ ಪ್ರಗತಿಶೀಲ ಸಂಘದ ಆಶ್ರಯದಲ್ಲಿ ಎಡೆಯೂರು ಜಗದ್ಗುರು ತೋಂಟದಾರ್ಯ ಮಠದಲ್ಲಿ ಮಾ.11ರಂದು 2684ನೇ ಶಿವಾನುಭವ ಕಾರ್ಯಕ್ರಮ ಜರುಗಲಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಪೂಜ್ಯ ಡಾ. ತೆ-ೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸಲಿದ್ದಾರೆ. ಶಿವಾನುಭವದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಿಸಲಾಗುವುದು. 'ಮಹಿಳೆ-ಸಾಹಿತ್ಯ ಮತ್ತು ಸಾಮಾಜಿಕ ಕ್ಷೇತ್ರ' ವಿಷಯ ಕುರಿತು ಬೆಂಗಳೂರು ಆಕಾಶವಾಣಿಯ ಮುಖ್ಯಸ್ಥೆ ಡಾ. ನಿರ್ಮಲಾ ಯಲಿಗಾರ ಉಪನ್ಯಾಸ ನೀಡಲಿದ್ದಾರೆ. ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿ ಪಡೆದ ನಿಮಿತ್ತ ಡಾ. ತೇಜ ಚನ್ನಯ್ಯ ಹಿರೇಮಠ, ಕನ್ನಡಪ್ರಭ ಏಷ್ಯಾನೆಟ್ ಸುವರ್ಣ ನ್ಯೂಸ್ ವತಿಯಿಂದ 'ಸುವರ್ಣ ಸಾಧಕ' ಪ್ರಶಸ್ತಿ ಪುರಸ್ಕೃತರಾದ ನಿಮಿತ್ತ ಬಲರಾಮಸಾ ಷಣ್ಮುಖಸಾ ಬಸವಾ ಅವರಿಗೆ ಸಂಮಾನ ಜರುಗಲಿದೆ.

ಮುಖ್ಯಅತಿಥಿಗಳಾಗಿ ಚನ್ನಬಸಪ್ಪ ಕಂಠಿ, ಸುಧಾ ಹುಚ್ಚಣ್ಣವರ ಭಾಗವಹಿಸುವರು. ಹೇಮಾವತಿ ಶ್ರೀಕಾಂತ ಹೂಲಿ ವಚನ ಸಂಗೀತ ಹಾಡುವರು.

ಧರ್ಮಗ್ರಂಥ ಪಠಣವನ್ನು ಅನ್ವಿತಾ ಆರ್.ಪಾಟೀಲ, ವಚನ ಚಿಂತನೆಯನ್ನು ವೈಭವಿ ಎಸ್.ಗಾಣಿಗೇರ ಮಾಡುವರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಜಿಲ್ಲಾ ಕದಳಿ ಮಹಿಳಾ ವೇದಿಕೆ, ಗದಗ ಇವರು ವಹಿಸಿಕೊಂಡಿದ್ದಾರೆಂದು ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

ಹಾನಗಲ್ ಕುಮಾರಸ್ವಾಮಿಗಳ ಸಾಧನೆ ಅನನ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ಮರಿಚಿಕೆಯಾಗಿದ್ದ ಕಾಲದಲ್ಲಿ ಹಾನಗಲ್ ಕುಮಾರ ಸ್ವಾಮಿಗಳು ಸಮಾಜದ ಅಭಿವೃದ್ಧಿಗಾಗಿ, ಬಡತನ ಮತ್ತು ದಾರಿದ್ರ್ಯವನ್ನು ಹೋಗಲಾಡಿಸಲು ಶಿಕ್ಷಣ ಬಹಳ ಮುಖ್ಯ ಎಂದು ಸಾರಿದರು. ಅನೇಕ ಧಾರ್ಮಿಕ, ಶಿಕ್ಷಣ, ಸಂಘ-ಸಂಸ್ಥೆಗಳಿಗೆ ಮೂಲ ಪ್ರೇರಕರು ಹಾನಗಲ್ ಕುಮಾರಸ್ವಾಮಿಗಳು ಆಗಿದ್ದರು ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2683ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಹಾನಗಲ್ ಕುಮಾರಸ್ವಾಮಿಗಳು 1904ರಲ್ಲಿ ಅಖಿಲ ಭಾರತ ವೀರಶೈವ ಮಹಾಸಭೆಯನ್ನು ಸ್ಥಾಪಿಸಿ, ಶಿವಯೋಗ ಮಂದಿರ ಸಂಸ್ಥೆಯ ಮೂಲಕ ಸಾಧಕರಿಗೆ ಧಾರ್ಮಿಕ, ಶಿಕ್ಷಣ, ಸಂಸ್ಕಾರ, ಯೋಗ, ಸಂಗೀತ ತರಬೇತಿ ನೀಡಿ ನಾಡಿಗೆ ಅರ್ಹ ಮಠಾಧೀಶರನ್ನು ನೀಡಿದ್ದಾರೆ. ಪಂಚಾಕ್ಷರಿ ಗವಾಯಿಗಳಿಗೂ ಸಂಗೀತ ಶಿಕ್ಷಣ ನೀಡಿ ಗುರುಗಳಾಗಿದ್ದು ಸ್ಮರಣೀಯ. ವಚನ ಪಿತಾಮಹ ಫ.ಗು. ಹಳಕಟ್ಟಿಯವರೊಂದಿಗೆ ವಚನ ಸಾಹಿತ್ಯವನ್ನು ಸಂಗ್ರಹಿಸಿ ಸಂರಕ್ಷಿಸುವಲ್ಲಿ ಹಾನಗಲ್ ಕುಮಾರಸ್ವಾಮಿಗಳ ಪಾತ್ರ ಮಹತ್ತರವಾದುದು ಎಂದು ಸ್ಮರಿಸಿದರಲ್ಲದೆ,

ಶರಣ ಸಂಸ್ಕೃತಿ, ಸಾಹಿತ್ಯ, ಸಂಗೀತ, ಕೃಷಿ, ಯೋಗ-ಶಿವಯೋಗ, ವಿಭೂತಿ ತಯಾರಿ-ಕೆ, ಗೋ ಸಂರಕ್ಷಣೆ ಮುಂತಾದ ಕ್ಷೇತ್ರಗಳಲ್ಲಿ ಅವರು ಸಲ್ಲಿಸಿದ ಸೇವೆ, ಸಾಧನೆ ಅನನ್ಯ ಮತ್ತು ಅನುಪಮ ಎಂದರು.

ಸಮ್ಮುಖವನ್ನು ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಪೂಜ್ಯ ಶ್ರೀ ಡಾ. ಕಲ್ಲಯ್ಯಜ್ಜನವರು ವಹಿಸಿದ್ದರು.

ಸವಿತಾ ಕುಪ್ಪಸದ (ಗುಡ್ಡದ) ಇವರು ವಚನಸಂಗೀತ ಹಾಡಿದರು. ಗುರುನಾಥ ಸುತಾರ, ಅಶೋಕ ಸುತಾರ ತಂಡದವರು ವಚನ ಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಕು. ಮನೋಜ ಅಶೋಕ ಸುತಾರ, ವಚನ ಚಿಂತನೆಯನ್ನು ಕು. ನಿಖಿತಾ ಅಶೋಕ ಸುತಾರ ಇವರು ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಕೊಂಡಿದ್ದ ಚನ್ನಬಸಪ್ಪ ಹಾಗೂ ವೀರೇಶ ನಂದಿಹಾಳ ಹಾಗೂ ಪರಿವಾರ ಗಜೇಂದ್ರಗಡ ಅವರನ್ನು ಪೂಜ್ಯರು ಸಂಮಾನಿಸಿದರು.

ಡಾ. ರಾಜಶೇಖರ ದಾನರೆಡ್ಡಿ ಉಪನ್ಯಾಸಕರಾಗಿ ಪಾಲ್ಗೊಂಡು ಮಾತನಾಡಿ, ಪುಟ್ಟರಾಜ ಕವಿ ಗವಾಯಿಗಳು ಸಂಗೀತ ಕ್ಷೇತ್ರದ ದಿಗ್ಗಜರು, ತ್ರಿಭಾಷಾ ಕವಿಗಳು, ಬರಹಗಾರರು, ಅನುಪಮ ಅಧ್ಯಾತ್ಮ ಜೀವಿ, ಸಮಾಜ ಸುಧಾರಕರಾಗಿದ್ದರು. ಪುಟ್ಟರಾಜ ಕವಿ ಗವಾಯಿಗಳು ಅಂಧ, ಅನಾಥ ಮಕ್ಕಳಿಗೆ ಉಚಿತವಾಗಿ ಸಂಗೀತ ಮತ್ತು ಅನ್ನ-ಆಶ್ರಯ ಕಲ್ಪಿಸಿ ಅವರ ಬಾಳನ್ನು ಬೆಳಗಿದ್ದಾರೆ ಎಂದು ಹೇಳಿದರು.

ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ. ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

ತುರ್ತು ಸಭೆ ಕರೆಯಲು ಕರವೇ ಒತ್ತಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ನಾಮಫಲಕ ಕಡ್ಡಾಯ ವಿಚಾರವಾಗಿ ಜಿಲ್ಲಾಧಿಕಾರಿಗಳು ತುರ್ತು ಸಭೆ ಕರೆದು, ಗದಗ ನಗರ ಮತ್ತು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ ಮುಂಗಟ್ಟುಗಳು, ಜಾಹೀರಾತು ಫಲಕಗಳು ಶೇ. 60ರಷ್ಟು ಕನ್ನಡದಲ್ಲಿ ಇರುವಂತೆ ಆದೇಶಿಸಬೇಕೆಂದು ಕರವೇ ಜಿಲ್ಲಾಧ್ಯಕ್ಷ ಶರಣು ಎಸ್.ಗೋಡಿ ಆಗ್ರಹಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, 60-40 ಅನುಪಾತದಲ್ಲಿ ಶೇ.60ರಷ್ಟು ಕನ್ನಡದಲ್ಲಿ ದೊಡ್ಡದಾಗಿ ನಾಮಫಲಕ ಹಾಕಬೇಕೆಂಬ ಆದೇಶವಿದ್ದರೂ ಸಹ ಗದಗ ಜಿಲ್ಲೆಯಲ್ಲಿ ಕಾಟಾಚಾರಕ್ಕೆ ಆಂಗ್ಲ ಭಾಷೆಯ ಫಲಕ ಬಳಸಿಕೊಂಡಿದ್ದಾರೆ. ಇಂತವರಿಗೆ ನಗರಸಭೆ ಇತ್ತೀಚೆಗೆ ಕಾಟಾಚಾರಕ್ಕೆ ನೋಟಿಸ್ ಕೊಟ್ಟು ಸುಮ್ಮನೆ ಕೂತಿದ್ದಾರೆ. ತಕ್ಷಣ ಆಂಗ್ಲ ನಾಮಫಲಕಗಳನ್ನು ಹಾಗೂ ಜಾಹೀರಾತು ಫಲಕಗಳನ್ನು ಕಿತ್ತು ಹಾಕುವಂತೆ ಕರವೇ ಒತ್ತಾಯಿಸುತ್ತದೆ ಎಂದು ತಿಳಿಸಿದ್ದಾರೆ.

■ ವಿಜಯಸಾಕ್ಷಿ ಸುದ್ದಿ, ಗದಗ

ವಂಹಾಶಿವರಾತ್ರಿಂಯ ಅಂಗವಾಗಿ ಇಲ್ಲಿನ ಸಂಭಾಪೂರ ರಸ್ತೆಯ ಕೇಶವ ಪಾರ್ಕ್ ಬಡಾವಣೆಯ ಅಷ್ಟಭುಜ ಈಶ್ವರ ಲಿಂಗಕ್ಕೆ ವಿವಿಧ ಹಣ್ಣುಗಳಿಂದ ಅಲಂಕಾರ ಮಾಡಲಾಗಿತ್ತು. ಅಪಾರ ಸಂಖ್ಯೆಯ ಭಕ್ತರು ದರ್ಶನ ಮಾಡಿ ಪ್ರಸಾದ ಸ್ವೀಕರಿಸಿ, ತಮ್ಮ ಉಪವಾಸ ವ್ರತವನ್ನು ಮುಕ್ತಾಯಗೊಳಿಸಿದರು. ದೇವಸ್ಥಾನದ ಸಮಿತಿ ಅಧ್ಯಕ್ಷ ಅಂದಪ್ಪ ಬಿಂಗಿ, ಉಪಾಧ್ಯಕ್ಷ ಬಿ.ಎಸ್. ಹಿರೇಮಠ, ಕಾರ್ಯದರ್ಶಿ ಜಗದೀಶ ಹುಡೇದಮಠ, ಖಜಾಂಚಿ ಬಸಯ್ಯ ಇಟಗಿಮಠ ಸೇರಿದಂತೆ ಪದಾಧಿಕಾರಿಗಳು ಹಾಜರಿದ್ದರು.

'ಕ್ಷೇತ್ರಪತಿ'ಗೆ ತೀರ್ಪುಗಾರರ ಅತ್ಯುತ್ತಮ ಚಿತ್ರ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಗ್ರಾಮದ ಇಂಜಿನಿಯರ್ ಶ್ರೀಕಾಂತ ಕಟಗಿಯವರ 'ಕ್ಷೇತ್ರಪತಿ' ಕನ್ನಡ ಸಿನಿಮಾ 15ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ತೀರ್ಪುಗಾರರ ಮೆಚ್ಚುಗೆ ಪ್ರಶಸ್ತಿಗೆ ಆಯ್ಕೆಯಾಗಿದೆ.

ಗುಲ್ಲು, ಹೊಂದಿಸಿ ಬರೆಯಿರಿ, ಹೊಯ್ಸಳ ಚಿತ್ರಗಳ ಮೂಲಕ ಅಪಾರ ಜನಮನ್ನಣೆ ಪಡೆದಿರುವ ನಟ ನವೀನ್ ಶಂಕರ ನಾಯಕ ನಟನಾಗಿ ಅಭಿನಯಿಸಿದ್ದಾರೆ. ಆಶ್ರಗ ಕ್ರಿಯೇಷನ್ಸ್ ಲಾಂಛನದಲ್ಲಿ ಮತ್ತು ದ ಇಮೋಷನ್ಸ್ ಫ್ಯಾಕ್ಟರಿ ಗ್ರೂಪ್ ಸಹ ನಿರ್ಮಾಣದಲ್ಲಿ ಈ ಚಿತ್ರ ನಿರ್ಮಾಣವಾಗಿದೆ. ರವಿ ಬಸ್ರೂರ್ ಸಂಗೀತವಿದ್ದು, ಮೂವೀಸ್ ಈ ಚಿತ್ರವನ್ನು ಅರ್ಪಿಸುತ್ತಿದೆ. ಖ್ಯಾತ ಕೆಆರ್‌ಜಿ ಡಿಸ್ಟ್ರಿಬ್ಯೂಟರ್ಸ್ ಬಿಡುಗಡೆ ಮಾಡಿದೆ.

ನವೀನ್ ಶಂಕರ್ ಹಾಗೂ ಅರ್ಚನಾ ಜೋಯಿಸ್ ನಾಯಕ-ನಾಯಕಿಯಾಗಿ ನಟಿಸಿದ್ದಾರೆ. ಅಚ್ಯುತ್ ಕುಮಾರ್, ರಾಹುಲ್ ಐನಾಪುರ, ಕೃಷ್ಣ ಹೆಬ್ಬಾಳೆ, ಶೈಲಶ್ರೀ ಅರಸ್, ನಾಟ್ಯ ರಂಗ, ಹರ್ಷ ಅರ್ಜುನ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ಕ್ಷೇತ್ರಪತಿ ಸಿನಿಮಾಗೆ ಪ್ರಶಸ್ತಿ ಸಿಕ್ಕ ಖುಷಿಯಲ್ಲಿ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಬಾಬರಿ ಸೇರಿದಂತೆ ಇಡೀ ತಿಮ್ಮಾಪೂರ ಗ್ರಾಮಸ್ಥರು ನಿರ್ದೇಶಕ ಶ್ರೀಕಾಂತ ಕಟಗಿ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಗ್ರಾಮದ ಭಾರ್ಗವ ಎಚ್. ಕೆ, ಜಗದೀಶ ಯ್ಯಾವಣಕಿ, ಶ್ರೀಕಾಂತ ಇದ್ಲಿ, ಭೀಮಪ್ಪ ಗಂಗರಾಹುತರ, ಕಲ್ಲಪ್ಪ ಆಲೂರ, ಹಾಲೇಶ ಗದಗ, ರವಿ ಗುಡ್ಲನೂರ, ನಿಂಗಪ್ಪ ಗುಡ್ಲನೂರ, ಮಹೇಶ ಬೆಟಗೇರಿ, ಶರಣಪ್ಪ ಜೋಗಿನ, ಹುಚ್ಚೀರಪ್ಪ ಜೋಗಿನ, ಇಸ್ಮಾಯಿಲ್ ನದಾಫ್, ಹೇಮರಡ್ಡಿ ಮಳ್ಳಿ ಮುಂತಾದವರು ಶ್ರೀಕಾಂತ ಕಟಗಿ ಸಾಧನೆಗೆ ಹರ್ಷ ವ್ಯಕ್ತಪಡಿಸಿದ್ದಾರೆ.

ಸಾಕ್ಷಾತ್ ಶಿವನೇ ಧರೆಗಿಳಿದ ಪುಣ್ಯದಿನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವೀರಶೈವ ಧರ್ಮದಲ್ಲಿ ಗುರು-ಲಿಂಗ-ಜಂಗಮಕ್ಕೆ ವಿಶಿಷ್ಟ ಸ್ಥಾನಮಾನವಿದೆ. 'ನಾವೆಲ್ಲರೊಂದು ವಿಶ್ವವೇ ನಮ್ಮ ಬಂಧು' ಎಂದು ಸಾರುವ ಧರ್ಮ ಪರಂಪರೆಗೆ ಪೂರಕವಾಗಿ ಲಿಂ.ವೀರಗಂಗಾಧರ ಜಗದ್ಗುರುಗಳು ಮಾನವ ಧರ್ಮಕ್ಕೆ ಜಯವಾಗಲಿ ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ಸಾರಿದ್ದಾರೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಮುಕ್ತಿಮಂದಿರ ಧರ್ಮ ಕ್ಷೇತ್ರದಲ್ಲಿ 3 ದಿನಗಳ ಕಾಲ ನಡೆಯವ ಮಹಾಶಿವರಾತ್ರಿ ಜಾತ್ರಾಮಹೋತ್ಸವ ಅಂಗವಾಗಿ ಶಿವಲಿಂಗ ಪೂಜೆ, ಜಂಗಮ ವಟುಗಳಿಗೆ ಅಯ್ಯಾಚಾರ-ಲಿಂಗದೀಕ್ಷೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನೆರವೇರಿಸಿ ಆಶೀರ್ವಚನ ನೀಡಿದರು.

ಲಿಂಗದೀಕ್ಷೆಯು ಭಗವಂತನನ್ನು ಸಾಕ್ಷಾತ್ಕಾರ ಪಡಿಸಿಕೊಳ್ಳುವ ಚೈತನ್ಯ ಶಕ್ತಿಸಾಧನವಾಗಿದೆ. ಶ್ರೀಗುರುವಿನಿಂದ ಶಿವದೀಕ್ಷಾ ಸಂಪನ್ನರಾಗಿ ಇಷ್ಟಲಿಂಗ ಪಡೆದು ಪೂಜಿಸಿದರೆ ಮಾನವ ಜನ್ಮ ಸಾರ್ಥಕವಾಗುತ್ತದೆ. ಮಹಾಶಿವರಾತ್ರಿಯ ಉಪವಾಸ ವ್ರತಾಚರಣೆಯು ಆತ್ಮ ಸಾಕ್ಷಾತ್ಕಾರದ ಹಬ್ಬವಾಗಿದೆ. ಅಜ್ಞಾನದ ಅಂಧಕಾರ ಕಳೆದು ಜಗತ್ತಿಗೆ ಸುಜ್ಞಾನ ದಯಪಾಲಿಸಲು ಸಾಕ್ಷಾತ್ ಶಿವನೇ ಧರೆಗಿಳಿದ ಪುಣ್ಯದಿನವಾಗಿದೆ. ವೀರಶೈವ ಧರ್ಮದವರು ಅಯ್ಯಾಚಾರ ಮತ್ತು ಶಿವದೀಕ್ಷೆ ಸಂಸ್ಕಾರ ಪಡೆಯುವುದು ಪ್ರಮುಖವಾಗಿದೆ ಎಂದರು.

ಲಕ್ಷ್ಮೇಶ್ವರ, ಕುಂದಗೋಳ, ಶಿಗ್ಗಾಂವ ತಾಲೂಕಿನ ಕ್ಷೇತ್ರದ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಆಗಮಿಸಿದ್ದರು. ಅನೇಕ ಜಂಗಮ ವಟುಗಳಿಗೆ ಲಿಂಗದೀಕ್ಷೆ ಕಾರ್ಯ ನೆರವೇರಿಸಲಾಯಿತು.

■ ವಿಜಯಸಾಕ್ಷಿ ಸುದ್ದಿ, ರಾಮದುರ್ಗ

ರಾಮದುರ್ಗ ಸಮೀಪದ ತುರನೂರ ಗ್ರಾಮದಲ್ಲಿ ಮೌಲ್ಯ ಸಂಪದ ಪತ್ರಿಕೆಯ 1ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಹೊಳೆಯಾಲೂರಿನ ಕಲ್ಮೇಶ್ವರ ಪದವಿ ಮಹಾವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ಸಿನಿಮಾ ಪತ್ರಕರ್ತ ಡಾ. ಪ್ರಭು ಗಂಜಿಹಾಳ ಅವರಿಗೆ ರಾಜ್ಯಮಟ್ಟದ 'ಸಿನಿಸಂಪದ' ಪ್ರಶಸ್ತಿಯನ್ನು ಖಜೂರಿ ಮಠದ ಶ್ರೀಗಳು ಪ್ರದಾನ ಮಾಡಿದರು. ಸಿನಿ ಸಂಪದ ಸಂಪಾದಕ ಸೊಮಶೇಖರ ಸೊಗಲದ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಶಿವಯೋಗಮಂದಿರಕ್ಕೆ ಶ್ರೀಗಳಿಂದ ಪಾದಯಾತ್ರೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಶಾಖಾ ಶಿವಯೋಗಮಂದಿರ ನಿಡಗುಂದಿ ಕೊಪ್ಪದ ಅಭಿನವ ಚನ್ನಬಸವ ಮಹಾಸ್ವಾಮಿಗಳ ನೇತೃತ್ವದಲ್ಲಿ ಲಿಂಗನಾಯಕನ ಹಳ್ಳಿಯ ಶ್ರೀ ನಿರಂಜನ ದೇವರು, ಶ್ರೀ ಚಂದ್ರಶೇಖರ ದೇವರು ಅವರ ಸಮ್ಮುಖದಲ್ಲಿ ಬಾದಾಮಿ ಬನಶಂಕರಿ ದೇವಿ ದೇವಸ್ಥಾನದಿಂದ ಲಿಂ ಶ್ರೀ ಹಾನಗಲ್ಲ ಗುರುಕುಮಾರ ಮಹಾಶಿವಯೋಗಿಗಳವರ ಪಾವನ ಕ್ಷೇತ್ರ ಶ್ರೀ ಮದ್ವೀರಶೈವ ಶಿವಯೋಗಮಂದಿರದವರೆಗೆ ದ್ವಿತೀಯ ವರ್ಷದ ಪಾದಯಾತ್ರೆ ಕೈಗೊಂಡು ಶಿವಯೋಗ ಮಂದಿರ ಗೋಶಾಲೆಯ ಜಾನುವಾರುಗಳಿಗೆ

ಸದ್ಭಕ್ತರು ಸಂಗ್ರಹಸಿದ್ದ ಹೊಟ್ಟು-ಮೇವು, ಪ್ರಸಾದ ನಿಲಯಕ್ಕೆ 34 ಕ್ವಿಂಟಾಲ್ ಧವಸ-ಧಾನ್ಯಗಳನ್ನು ಹಾಗೂ ಕಾಣಿಕೆಗಳನ್ನು ತಲುಪಿಸಿದರು.

ಈ ಸಂದರ್ಭದಲ್ಲಿ ಹೊನ್ನಿಗನೂರ ಗ್ರಾಮದ ಗುರು-ಹಿರಿಯರು, ಮಹಿಳೆಯರು, ಯುವಕರು, ಮಕ್ಕಳು, ಭಜನಾ ಮಂಡಳಿಯ ಸದಸ್ಯರು ಶ್ರೀಗಳವರ ಜೊತೆಗೆ ಪಾದಯಾತ್ರೆ ಕೈಗೊಂಡಿದ್ದರು.

ಶ್ರೀ ಅಂಜನೇಯ ಸ್ವಾಮೀಯ ರಥೋತ್ಸವ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಬಾಲೇನಹಳ್ಳಿ ಗ್ರಾಮದ ಶ್ರೀ ಅಂಜನೇಯ ಸ್ವಾಮೀಯ 7ನೇ ವರ್ಷದ ರಥೋತ್ಸವ ಸಡಗರ-ಸಭ್ರಮದಿಂದ ಜರುಗಿತು. ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಅಂಜನೇಯ ಮೂರ್ತಿಯ ಮೆರವಣಿಗೆ, ಪಲ್ಲಕ್ಕಿ ಉತ್ಸವ, ನಂದಿಕೋಲು ಮೆರವಣಿಗೆ ನಡೆಯಿತು. ಭಕ್ತರು ದೇವಸ್ಥಾನದ ಗದ್ದುಗೆಗೆ ಪೂಜೆ ಸಲ್ಲಿಸಿ ಹರಕೆ ತೀರಿಸಿದರು.

ಮಹಾ ಶಿವರಾತ್ರಿ ಅಂಗವಾಗಿ ಬೆಳಿಗ್ಗೆ ಸಂಪ್ರದಾಯದಂತೆ ವಿಶೇಷ ಪೂಜಾ ಕಾರ್ಯಗಳು ನಡೆದವು. ಸಂಜೆ ಉತ್ಸವ ಮೂರ್ತಿಯನ್ನು ಪ್ರಭಾವಳಿಯಲ್ಲಿ ಅಲಂಕರಿಸಿ, ಸಕಲ ವಾದ್ಯ ವೈಭವಗಳೊಂದಿಗೆ ಮೆರವಣಿಗೆ ಮೂಲಕ ತರಲಾಯಿತು. ನಂತರ ರಥೋತ್ಸವಕ್ಕೆ ಚಾಲನೆ ನೀಡಲಾಯಿತು. ಈ ವೇಳೆ ಗ್ರಾಮದ ಜಿ. ದೊಡ್ಡರಾಮಪ್ಪ, ಜಿ.ಕೆಂಚನಗೌಡ್ರು, ಜಿ.ರಾಮನಗೌಡ್ರು, ವಾಲ್ಮೀಕಿನಾಯಕ ಸಮಾಜದ ಮಾಜಿ ಅಧ್ಯಕ್ಷ ಕೆ.ಉಚ್ಚೆಂಗೆಪ್ಪ, ಕಾರ್ಯದರ್ಶಿ ಎಚ್.ಕೆ. ಮಂಜುನಾಥ, ಉಪನ್ಯಾಸಕರಾದ ಎಚ್.ಕೊಟ್ರೇಶ, ಹರಿಯಮ್ಮನಹಳ್ಳಿ ಮಹಾಂತೇಶ, ಜಿ.ಶಿವನಗೌಡ, ಗ್ರಾ.ಪಂ ಸದಸ್ಯ ಶೆಟ್ಟಿನಾಯ್ಕ, ನಿವೃತ್ತ ಮುಖ್ಯ ಶಿಕ್ಷಕ ರೇವಣಸಿದ್ದಪ್ಪ, ಕೆಂಚಪ್ಪ, ಮಂಜಪ್ಪ, ರವಿ ಕುಮಾರ್, ಮೌನೇಶ್, ಮಹಾಲಿಂಗಪ್ಪ, ದೊಡ್ಡ ಹಾಲಪ್ಪ, ಅಶೋಕ್, ಜಗದೀಶ್ ಮುಂತಾದವರಿದ್ದರು.

ಮಂಡಲಾಧ್ಯಕ್ಷರ ನೇಮಕಕ್ಕೆ ವಿರೋಧ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪಕ್ಷ ವಿರೋಧಿ ಚಟುವಟಿಕೆಗಳಲ್ಲಿ ಪಾಲ್ಗೊಂಡವರನ್ನು ಜಿಲ್ಲಾ ಕಮಿಟಿಯಲ್ಲಿ ನೇಮಿಸಿಕೊಂಡಿದ್ದು, ಪಕ್ಷದ ನಿಷ್ಠಾವಂತ ಕಾರ್ಯಕರ್ತರ ಗಮನಕ್ಕೆ ತರದೆ ತಮ್ಮ ಇಚ್ಛೆಯನುಸಾರ ಮಂಡಲ ಅಧ್ಯಕ್ಷರ ನೇಮಕ ಮಾಡಿಲಾಗಿದೆ. ಕೂಡಲೇ ಇವರನ್ನು ಉಚ್ಚಾಟಿಸುವಂತೆ ಕಾರ್ಯಕರ್ತರ ಒತ್ತಾಯವಿದೆ ಎಂದು ಮಾಜಿ ಶಾಸಕ ಜಿ.ಕರುಣಾಕರರೆಡ್ಡಿ ತಿಳಿಸಿದರು.

ಹ

ಶ್ರೀ ಕಾಶಿ ವಿಶ್ವನಾಥ ದೇವಸ್ಥಾನದಲ್ಲಿ 36ನೇ ಜೀವನ ದರ್ಶನ ಮಾಸಿಕ ಕಾರ್ಯಕ್ರಮ

ಶಿವ ಸಕಲ ಸಂಕಷ್ಟಗಳಿಗೆ ಪರಿಹಾರ ನೀಡಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿವನು ಸರಳತೆ, ಪ್ರಾಮಾಣಿಕತೆ ಮತ್ತು ನಿಷ್ಕಲ್ಮಶ ಮನಸ್ಸುಗಳ ಪ್ರತೀಕ. ಛಲಬಿಡದ ಸಾಧನೆಯ ದ್ಯೋತಕ. ಧ್ಯಾನಪ್ರಿಯ ಶಿವ ಭಕ್ತರಿಂದ ಬಯಸುವುದು ನಿಶ್ಕಲ್ಮಶ ಮತ್ತು ಪ್ರಾಮಾಣಿಕ ಭಕ್ತಿ ಮಾತ್ರ. ತೋರಿಕೆಯ ಮತ್ತು ಆಡಂಬರದ ಪೂಜೆಯನ್ನು ಬಯಸದ ಮಹಾದೇವನನ್ನು ಇಂದ್ರಿಯ ನಿಗ್ರಹ, ಧ್ಯಾನ, ಸಂಯಮ ಮತ್ತು ವಿಶ್ವಾಸಭರಿತರಾಗಿ ಶಿವರಾತ್ರಿಯಂದು ಧ್ಯಾನಿಸಿದರೆ ಆತ ಪ್ರಸನ್ನಗೊಳ್ಳುತ್ತಾನೆ ಎಂದು ಶ್ರೀ ಷ.ಬ್ರ. ಗುರು ಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ ನುಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರೊ. ಎಂ.ಎನ್. ಕಾಮನಹಳ್ಳಿ ಮಾತನಾಡಿ, ಪ್ರಪಂಚದಾದ್ಯಂತ ಇರುವ ಹಿಂದೂಗಳಿಗೆ ಮಹಾ ಶಿವರಾತ್ರಿ ಬಹಳ ವಿಶೇಷವಾದ ದಿನವಾಗಿದೆ. ಇದು ಪ್ರತಿ ವರ್ಷ ನಡೆಯುವ ಒಂದು ದೊಡ್ಡ ಆಧ್ಯಾತ್ಮಿಕ ಆಚರಣೆಯಂತಿದೆ. ಅಲ್ಲಿ ಜನರು ಶಿವನಿಗೆ ತಮ್ಮ ಪ್ರೀತಿ ಮತ್ತು ಭಕ್ತಿಯನ್ನು ತೋರಿಸಲು ಒಟ್ಟಾಗಿ ಸೇರುತ್ತಾರೆ. ಈ ಕ್ರಿಯೆಗಳನ್ನು ಶುದ್ಧ ಹೃದಯ ಮತ್ತು ಶಿವನಿಗೆ ಆಳವಾದ ಭಕ್ತಿಯಿಂದ ಮಾಡಲಾಗುತ್ತದೆ ಎಂದರು.

ಅವರು ವಿವೇಕಾನಂದ ನಗರದ ಶ್ರೀ ಕಾಶಿ ವಿಶ್ವನಾಥ ದೇವಸ್ಥಾನದಲ್ಲಿ ಮಹಾಶಿವರಾತ್ರಿ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಎಲ್ಲ ಆಡಂಬರಗಳಿಂದ ಮುಕ್ತರಾಗಿ, ಸರಳ ಮನಸ್ಸಿನಿಂದ ಪರಶಿವನನ್ನು ನೆನದು, ಭಜಿಸಿ ಶಿವರಾತ್ರಿಯನ್ನು ಆಚರಿಸೋಣ. ಸರಳತೆ, ಪ್ರಾಮಾಣಿಕತೆ, ಸತ್ಯ ಮತ್ತು ಶಕ್ತಿಯ ದೇವತೆ ಈಶ್ವರ ಲೋಕದಲ್ಲಿರುವ ಸಕಲ ಸಂಕಷ್ಟಗಳಿಗೆ ಪರಿಹಾರ ನೀಡಲಿ ಎಂದು ಆಶೀರ್ವಚನ ನೀಡಿದರು.

ಜಿ.ಬಿ. ಗಾರವಾಡ, ಎಸ್. ಎಸ್. ಗೌಡರ ಅವರನ್ನು ಸನ್ಮಾನಿಸಲಾಯಿತು. ಕಸ್ತೂರಿಬಾಯಿ ಕಮ್ಮಾರ ಪ್ರಾರ್ಥನಾ ಗೀತೆ ಹಾಡಿದರು. ಕೋಶಾಧ್ಯಕ್ಷ ಎಂ.ಬಿ. ಚೆನ್ನಪ್ಪಗೌಡರ ಸ್ವಾಗತ ಹಾಗೂ ಪರಿಚಯ ಭಾಷಣ ಮಾಡಿದರು. ಕಾರ್ಯಕ್ರಮದ ನಿರೂಪಣೆಯನ್ನು ಸಮಿತಿಯ ಕಾರ್ಯದರ್ಶಿ ಕೆ.ಆಯ್. ಕುರುಗೋಡು ಮಾಡಿದರು. ಗೌರವಾಧ್ಯಕ್ಷ ಜಿ.ಜಿ. ಕುಲಕರ್ಣಿ, ಉಪಾಧ್ಯಕ್ಷ ಬಸವರಾಜ ಸುಂಕದ, ಸಹ ಕಾರ್ಯದರ್ಶಿ ಎಂ.ಕೆ. ಲಕ್ಕುಂಡಿ, ಕೋಶಾಧ್ಯಕ್ಷ ಎಂ.ಬಿ. ಚೆನ್ನಪ್ಪಗೌಡರ್, ಸಹ ಕೋಶಾಧ್ಯಕ್ಷ ಆರ್.ಬಿ. ಒಡೆಯರ, ನಿರ್ದೇಶಕರಾದ ವಿ.ಆರ್. ಕುಲಕರ್ಣಿ, ಅಮರೇಶ್ ಹಾದಿ, ಕಾರ್ತಿಕ್ ಮಡಿವಾಳರ್ ಮಹಾದೇವಿ ಗೋಗೇರಿ, ರಾಧಿಕಾ ಬಂದಂ, ಬಸವರಾಜ ಹಿರೇಮಠ, ಪ್ರಭಯಸ್ವಾಮಿ ಹಿರೇಮಠ ಹಾಗೂ ಭಕ್ತಾದಿಗಳು ಪಾಲ್ಗೊಂಡಿದ್ದರು.

ರೋಟರಿಯಲ್ಲಿ ಶಿಕ್ಷಣಾಧಿಕಾರಿಗಳಿಗಾಗಿ ಒಂದು ದಿನದ ಶೈಕ್ಷಣಿಕ ಕಾರ್ಯಾಗಾರ

ಶಿಶುಕೇಂದ್ರಿತ ಶಿಕ್ಷಣ ನಮ್ಮ ಆದ್ಯತೆಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಕರು ಬದಲಾಗುತ್ತಿರುವ ಸಾಮಾಜಿಕ ಅಗತ್ಯತೆ ಹಾಗೂ ಇಲಾಖೆಯ ಮಾನದಂಡಗಳಂತೆ ಶಿಶುಕೇಂದ್ರಿತ ಶಿಕ್ಷಣ ನಮ್ಮ ಆದ್ಯತೆಯಾಗಬೇಕು. ಮುಖ್ಯ ಶಿಕ್ಷಕರ ಬಲವರ್ಧನೆಗೆ ನಿಯಮಿತವಾಗಿ ಇಂತಹ ಕಾರ್ಯಾಗಾರಗಳ ಅಗತ್ಯತೆ ಇದೆ. ಈ ಪ್ರಯತ್ನಕ್ಕೆ ಕಾರಣರಾದ ಸರ್ವರನ್ನು ಅಭಿನಂದಿಸುತ್ತೇನೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ ರಡ್ಡೇರ ತಿಳಿಸಿದರು.

ರೋಟರಿ ಸಂಸ್ಥೆಯ ಚಂದ್ರಮೌಳಿ ಜಾಲಿ, ಶ್ರೀಧರ ಸುಲ್ತಾನಪುರ ಮಾತನಾಡಿ, ಗದಗ-ಬೆಟಗೇರಿ ರೋಟರಿ ಸಂಸ್ಥೆಯು ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಸದಾ ವಿವಿಧ ರೀತಿಯ ಬೆಂಬಲ ನೀಡುತ್ತಾ ಬಂದಿದೆ. ಈ ವರ್ಷ ಆರ್.ಎಸ್. ಬುರಡಿಯವರ ನೇತೃತ್ವದಲ್ಲಿ 'ಎಸ್ಎಸ್ಎಲ್‌ಸಿ ನಂತರ ಮುಂದೇನು' ಎಂಬ ಕಾರ್ಯಕ್ರಮದ ಮೂಲಕ ವೃತ್ತಿಪರ ಮಾರ್ಗದರ್ಶನ ಮತ್ತು ವಿದ್ಯಾರ್ಥಿಗಳನ್ನು ಪ್ರೇರಣೆ, ಸಂಕಲ್ಪ, ಸಂಜೀವಿನಿ ಎಂದು ವಿಂಗಡಿಸಿ ಅವರ ಪ್ರಗತಿಯನ್ನಾಧರಿಸಿ ವರ್ಗಗಳನ್ನು ನಡೆಸಿ, ಹಲವು ಪ್ರಯತ್ನಗಳನ್ನು ಮಾಡಲಾಗಿದೆ ಎಂದರು.

ಅವರು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಶಿಕ್ಷಣಾಧಿಕಾರಿಗಳ ಸಂಘದ ಜಿಲ್ಲಾ ಘಟಕ ಹಾಗೂ ರೋಟರಿ ಕ್ಲಬ್ ಗದಗ ಬೆಟಗೇರಿ ಸಹಯೋಗದೊಂದಿಗೆ ಗದಗ ಜಿಲ್ಲಾ ಶಿಕ್ಷಣಾಧಿಕಾರಿಗಳಿಗಾಗಿ ರೋಟರಿ ಹಾಲ್‌ನಲ್ಲಿ ನಡೆದ ಒಂದು ದಿನದ ಶೈಕ್ಷಣಿಕ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಶಿಕ್ಷಣಾಧಿಕಾರಿಗಳ ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಆರ್.ಎಸ್. ಬುರಡಿ, ಶಿಕ್ಷಣಾಧಿಕಾರಿಗಳ ಸಂಘವು ನಿಯಮಿತವಾಗಿ ಇಂತಹ ಕಾರ್ಯಾಗಾರ ಸಂಘಟಿಸಿ ಶಿಕ್ಷಣಾಧಿಕಾರಿಗಳ ಕಾರ್ಯವನ್ನು ಬೆಂಬಲಿಸುವ ಉದ್ದೇಶ ಹೊಂದಿದೆ ಎಂದರು.

ಜಿಲ್ಲಾ ಸಕಾಲ ಸಮಾಲೋಚಕರಾದ ಇಂಚಲ ಸಕಾಲ ಸೇವೆಗಳ ಅನುಷ್ಠಾನಗಳ ಕುರಿತು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಸಂಘಟನಾ ಕಾರ್ಯದರ್ಶಿ ಎಚ್.ಬಿ ರಡ್ಡೇರ ಶಿಕ್ಷಣಾಧಿಕಾರಿಗಳ ಸಂಘಟನೆ ಕುರಿತು ಮಾತನಾಡಿದರು.

ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಸ್ವಾಗತಿಸಿದರು. ಶಿವಕುಮಾರ ಕುರಿ ನಿರೂಪಿಸಿದರು. ಶಂಕರ ಹಡಗಲಿ ವಂದಿಸಿದರು. ಎಂ.ಎಚ್. ಕಂಬಳಿ, ಮಂಗಳಾ ತಾಪಸ್ಕರ, ಎಸ್.ಡಿ. ಕನವಳ್ಳಿ, ಎಚ್.ಎಂ. ಪಡ್ನೇಶಿ, ತಾಲೂಕು ಘಟಕಗಳ ಅಧ್ಯಕ್ಷರಾದ ಪಿ.ಸಿ. ಕಲಹಾಳ, ಎಂ.ಬಿ. ಹೊಸಮನಿ, ಎಸ್. ಆರ್. ನಧಾಪ್, ಗಂಗಾಧರ ಅಣ್ಣಿಗೇರಿ, ಮಜ್ಜಗಿ, ಬಿರಾದಾರ, ಕವಿತಾ ದಂಡಿನ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಘಟಕದ ಪದಾಧಿಕಾರಿಗಳು ಹಾಜರಿದ್ದರು.

ಕೆಜಿಎಸ್ ಶಾಲಾ ಮಕ್ಕಳಿಗೆ ರಾಗಿ ಮಾಲ್ಟ್ ವಿತರಣೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಹೊಸ ಬಸ್ ನಿಲ್ದಾಣದ ಬಳಿಯ ಸರ್ಕಾರಿ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಗೆ ಪ್ರಧಾನಮಂತ್ರಿ ಪೋಷಣ್ ಯೋಜನೆ ಅಡಿಯಲ್ಲಿ ಶ್ರೀ ಸತ್ಯಸಾಯಿ ಅನ್ನಪೂರ್ಣ ಟ್ರಸ್ಟ್ ಇವರಿಂದ ತಯಾರಿಸಲ್ಪಟ್ಟ ರಾಗಿ ಮಾಲ್ಟ್ ವಿತರಣಾ ಕಾರ್ಯಕ್ರಮಕ್ಕೆ ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಕ್ಕಳು ಶಾಲೆಗೆ ನಿರಂತರವಾಗಿ ಬರಬೇಕು ಎಂದು ಸರ್ಕಾರ ಹತ್ತು ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಈಗ ಕ್ಷೀರ ಭಾಗ್ಯ ಯೋಜನೆಯ ಜೊತೆಗೆ ರಾಗಿ ಮಾಲ್ಟ್ ಇಂದಿನಿಂದ ಎಲ್ಲಾ ಮಕ್ಕಳಿಗೂ ವಿತರಿಸಲಾಗುತ್ತದೆ ಎಂದರು.

ಈ ವೇಳೆ ಎಸ್‌ಡಿಎಂಸಿ ಸದಸ್ಯ ಅಬ್ದುಲ್‌ಗಣಿ ಕುದರಿ, ಶಾಲೆಯ ಮುಖ್ಯೋಪಾಧ್ಯಾಯ ಬಸವರಾಜ ಕುರಿ, ಶಿಕ್ಷಕ ವೃಂದ, ಸಿಬ್ಬಂದಿ ಬಳಗದವರು ಸೇರಿದಂತೆ ಮಕ್ಕಳು ಹಾಜರಿದ್ದರು.

ಶಿವ ಅಷ್ಟೋತ್ತರ ಶತನಾಮಾವಳಿ ಪ್ರತಿಗಳ ವಿತರಣೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರೀ ಸೋಮೇಶ್ವರ ದೇವಸ್ಥಾನದ ಪ್ರಾಂಗಣದಲ್ಲಿ ಶ್ರೀ ಮಹಾತಪಸ್ವಿ ಸೇವಾ ಪ್ರತಿಷ್ಠಾನದ ವತಿಯಿಂದ ಶಿವರಾತ್ರಿಯಂದು 'ಅಷ್ಟೈಶ್ವರ್ಯಕ್ಕೆ ಶಿವ ಅಷ್ಟೋತ್ತರ ಶತನಾಮಾವಳಿ' ಎಂಬ ಅಭಿಯಾನದ ಮೂಲಕ ಶಿವನ 108 ನಾಮಾಂಕಿತ ಇರುವ ಮುದ್ರಿತ ಪ್ರತಿಗಳನ್ನು ಶಿವನ ದೇವಾಲಯಗಳಲ್ಲಿ ಬರುವ ಭಕ್ತರಿಗೆ ವಿತರಿಸಿದರು.

ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ನಂತರ ಅವುಗಳನ್ನು ಸಾರ್ವಜನಿಕರಿಗೆ ವಿತರಿಸಲಾಯಿತು. ಈ ವೇಳೆ ಮಾತನಾಡಿದ ಪ್ರತಿಷ್ಠಾನದ ಕೇಂದ್ರ ಕಚೇರಿ ನಿರ್ದೇಶಕಿ ಲತಾ ಹಿರೇಮಠ, ಪ್ರತಿಷ್ಠಾನದ ವತಿಯಿಂದ ಪರಮಪೂಜ್ಯ ಅವಧೂತ ಕವಿ ಗುರುರಾಜ ಗುರೂಜಿ ಅವರ ಮಾರ್ಗದರ್ಶನ ಮತ್ತು ಆಶೀರ್ವಾದದ ಫಲದಿಂದ ಸಮಾಜಮುಖಿ ಕಾರ್ಯಕ್ರಮಗಳನ್ನು ನೆರವೇರಿಸಲಾಗುತ್ತಿದೆ. ಈ ಹಿಂದೆ ಶಿವರಾತ್ರಿಯ ದಿನದಂದು ಶಿವನಿಗೆ ಹೆಚ್ಚು ಪ್ರೀತಿಯ ರುದ್ರಾಕ್ಷಿ, ಹಾಗೂ ತುಳಸಿ ಸಸಿಗಳ ವಿತರಣೆ, ಪಾವನ ಜೀವನಕ್ಕೆ ಪರಮೇಶ್ವರನ ಮಂತ್ರಗಳ ಪ್ರತಿಗಳನ್ನು ಉಚಿತವಾಗಿ ವಿತರಿಸುವ ಕಾರ್ಯವನ್ನು ಮಾಡಲಾಗಿತ್ತು. ಗುರೂಜಿಯವರ ಆದೇಶದಂತೆ ಎಲ್ಲರೂ ಇದನ್ನು ನಿತ್ಯ ಪಠಣ ಮಾಡಿ ಉತ್ತಮ ಫಲಗಳನ್ನು ಪಡೆಯಬೇಕೆಂದು ಮನವಿ ಮಾಡಿದರು.

ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಸಂಗೀತಾ ಧರ್ಮಾಯತ, ನಂದಾ ಧರ್ಮಾಯತ, ವಿಜಯ ಹೊಳ್ಳಿಯವರಮಠ, ಎಸ್.ಎಫ್. ಆದಿ, ವೀರಭದ್ರಗೌಡ ಪಾಟೀಲ, ವೀರೇಶ್ವರಯ್ಯ ಹಿರೇಮಠ, ಸಿದ್ದಲಿಂಗೇಶ ಬಾವಿಕಟ್ಟಿ, ಚಂದ್ರು ಚಾವಡಿ, ಲಾವಣ್ಯ ಬಿಂಕದಕಟ್ಟಿ, ಮಂಜುಳಾ ಮುಳಗುಂದ ಮುಂತಾದವರಿದ್ದರು.

ಬಸವ ಯೋಗ ಮಂದಿರದಲ್ಲಿ ಮಹಿಳಾ ದಿನಾಚರಣೆ, ಮಹಾಶಿವರಾತ್ರಿ

ಪರಿವರ್ತನೆಗಾಗಿ ಸ್ತ್ರೀಶಕ್ತಿ ಶಿವಶಕ್ತಿಯಾಗಬೇಕಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ತ್ರೀಶಕ್ತಿಯ ಮೇಲೆ ಅನೀತಿ, ಅತ್ಯಾಚಾರ, ಶೋಷಣೆಗಳಾಗುತ್ತಿರುವ ವಿಷಯ ಪತ್ರಿಕೆ, ಮಾಧ್ಯಮಗಳ ಮೂಲಕ ತಿಳಿದಾಗ ವಿಷಾದವೆನಿಸುತ್ತದೆ. ಸ್ತ್ರೀ ಮೇಲಿನ ದೌರ್ಜನ್ಯ, ಶೋಷಣೆಗಳು ದೂರಾಗಬೇಕಾದರೆ ನಾವೆಲ್ಲ ಮುಖ್ಯವಾಗಿ ಮಹಿಳೆಯರು ಪಾಶ್ಚಿಮಾತ್ಯ ಸಂಸ್ಕೃತಿ-ಆಚಾರ-ವಿಚಾರ, ನಡೆ-ನುಡಿ, ಉಡಿಗೆ-ತೊಡಿಗೆಗಳನ್ನು ತೊರೆದು ಭಾರತೀಯ ಸಂಸ್ಕೃತಿ-ಸಂಸ್ಕಾರಗಳನ್ನು ಪಾಲಿಸಿದ್ದಾದರೆ ಸ್ತ್ರೀಶಕ್ತಿ ಒಂದು ಮಹಾನ್ ಶಕ್ತಿಯಾಗಿ ಬೆಳೆಯುವುದು. ಹೀಗಾಗಿ, ಪರಿವರ್ತನಶೀಲ ಸಮಾಜಕ್ಕೆ ಸ್ತ್ರೀಶಕ್ತಿ ಶಿವಶಕ್ತಿಯಾಗಬೇಕಾಗಿದೆ ಎಂದು ಸಮಾಜ ಸೇವಾ ಕಾರ್ಯಕರ್ತೆ ಸುರೇಖಾ ಪಿಳ್ಳಿ ಅಭಿಪ್ರಾಯಪಟ್ಟರು.



ಮಹಿಳೆಯರು ತಮ್ಮ ಬದುಕಿನಲ್ಲಿ ನಿತ್ಯ ಜಾಗ್ರತರಾಗಿದ್ದು, ಸುವಿಚಾರ, ಸುಸಂಸ್ಕೃತರಾಗಿ ಇರುವುದೇ ಮಹಾಶಿವರಾತ್ರಿಯಾಗಿದೆ. ಮಹಿಳೆ ಕೇವಲ ಮನೆಗೆ ಸೀಮಿತವಾಗಿರದೆ ನೆರೆ-ಹೊರೆಯವರ ಹಾಗೂ ಸಮಾಜದ ಏಳಿಗೆಗೆ ಸಹಕರಿಸುವ ಗುರಿ ಹೊಂದಿ, ಆ ಗುರಿ ಸಾಧನೆಯ ಅವಲೋಕನವೇ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಾಗಿದೆ ಎಂದು ಸುರೇಖಾ ಪಿಳ್ಳಿ ಅಭಿಪ್ರಾಯಪಟ್ಟರು.

ಇಲ್ಲಿನ ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರ ಸಹಯೋಗದಲ್ಲಿ ಸಿದ್ಧಲಿಂಗ ನಗರದ ಬಸವ ಯೋಗ ಮಂದಿರದಲ್ಲಿ ನಡೆದ ಮಹಾಶಿವರಾತ್ರಿ ಮತ್ತು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ಜಯಶ್ರೀ ವಸ್ತ್ರದ, ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಮತ್ತು ಕಾರ್ಯಕರ್ತ ಡಾ. ಎಂ.ವಿ. ಐಹೊಳ್ಳಿ ಮಾತನಾಡಿದರು. ಸುನಂದಾ ಜ್ಯಾನೋಪಂತರ ಶಿವಸ್ತೋತ್ರ ಹೇಳಿದರು, ವಿಜಯಾ ಚನ್ನಶೆಟ್ಟಿ ಶಿವರಾತ್ರಿ ಮಹಿಮೆ ತಿಳಿಸಿದರು. ವೀಣಾ ಗೌಡರ ಮಹಿಳೆಯ ಮಹಿಮೆ ತಿಳಿಸುವ ಕವನ ವಾಚನ ಮಾಡಿದರು. ವಿಜಯಲಕ್ಷ್ಮೀ ಆನೇಹೊಸೂರ ಭಕ್ತಿಗೀತೆ ಹೇಳಿದರು. ಸಹನಾ ಪಿಳ್ಳಿ ಆರೋಗ್ಯ-ಆಹಾರ ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ಶೋಭಾ ಭಾಂಡಗೆ, ಮಹಾದೇವಿ ಚರಂತಿಮಠ, ವಿಜಯಲಕ್ಷ್ಮೀ ಉಪವಾಸಿ, ರಾಜೇಶ್ವರಿ ಭಾಂಡಗೆ, ವಿಜಯಲಕ್ಷ್ಮೀ ಮೇಕಳಿ ಮುಂತಾದವರು ಉಪಸ್ಥಿತರಿದ್ದರು. ಜಯಶ್ರೀ ಡಾವಣಗೇರಿ ಸ್ವಾಗತಿಸಿದರು. ಶಾಂತಾ ಮುಂದಿನಮನಿ ಕಾರ್ಯಕ್ರಮ ನಿರೂಪಿಸಿದರು. ಸುಲೋಚನಾ ಐಹೊಳ್ಳಿ ವಂದಿಸಿದರು. ಶಕುಂತಲಾ ಬ್ಯಾಳಿ ಶಿವರಾತ್ರಿ ಮಹಾಪ್ರಸಾದ ವಿತರಣೆ ಸೇವೆ ಸಲ್ಲಿಸಿದರು.

ಸೇವಾ ಕಾರ್ಯದ ಮೂಲಕ ಶಿವರಾತ್ರಿ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಅಗಡಿ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳು ಮಹಾಶಿವರಾತ್ರಿ ದಿನ ಶ್ರೀ ಮುಕ್ತಿಮಂದಿರ ಧರ್ಮ ಕ್ಷೇತ್ರದಲ್ಲಿ ತ್ರಿಕೋಟಿ ಲಿಂಗ ಸ್ಥಾಪನೆಗಾಗಿ ಸಿದ್ದಗೊಂಡಿರುವ 5 ಸಾವಿರ ಶಿವಲಿಂಗಗಳನ್ನು ಶುಭ್ರಗೊಳಿಸಿ ಪೂಜೆ ಸಲ್ಲಿಸುವ ಸೇವಾ ಕಾರ್ಯದ ಮೂಲಕ ಶ್ರದ್ಧಾ-ಭಕ್ತಿಯಿಂದ ಶಿವರಾತ್ರಿ ಹಬ್ಬದಲ್ಲಿ ಪಾಲ್ಗೊಂಡರು.

ಕಾಲೇಜಿನ ಪ್ರಾಚಾರ್ಯ ಡಾ.ಪರಶುರಾಮ ಬಾರ್ಕಿ ಮಾರ್ಗದರ್ಶನ ಮತ್ತು ಎನ್ಎಸ್ಎಸ್ ಘಟಕದ ಅಧಿಕಾರಿ ಪ್ರೊ. ಸೋಮಶೇಖರ ಕೆರಿಮನಿ ಅವರ ನೇತೃತ್ವದಲ್ಲಿ ನೂರಾರು ವಿದ್ಯಾರ್ಥಿ-ವಿದ್ಯಾರ್ಥಿನಿಯರು ಧರ್ಮಕ್ಷೇತ್ರಕ್ಕೆ ಆಗಮಿಸಿ ಶಿವಲಿಂಗಗಳನ್ನು ನೀರಿನಿಂದ ಶುಭ್ರಗೊಳಿಸಿ ವಿಭೂತಿ ಲೇಪಿಸಿ, ಪುಷ್ಪ, ಬಿಲ್ವಪತ್ರೆಗಳಿಂದ ಅಲಂಕರಿಸಿದರು. ಪೂಜಿತಗೊಂಡ ಶಿವಲಿಂಗಗಳನ್ನು ಆಗಮಿಸಿದ ಅಪಾರ ಭಕ್ತರು ಸ್ಪರ್ಶಿಸಿ ಭಕ್ತಿಯಿಂದ ನಮಿಸಿದರು. ಕಾಲೇಜಿನ ಪ್ರೊ. ಸಿ.ಎಂ. ಕಗ್ಗಲಗೌಡರ, ಪ್ರೊ. ಷಣ್ಮುಕ ಗಡ್ಡೆಣ್ಣವರ, ಪ್ರೊ. ಅರುಣ ಕುಂಬಿ, ಪ್ರೊ. ಪ್ರಕಾಶ ಹೊಂಗಲ, ಪ್ರೊ.ಅರುಣ ತಂಡಿ, ಮಲ್ಲಯ್ಯ ಹಿರೇಮಠ ಮತ್ತು ಸಿಬ್ಬಂದಿ ಸೇರಿ ಹಲವರು ವಿದ್ಯಾರ್ಥಿಗಳ ಸೇವಾ ಕಾರ್ಯಕ್ಕೆ ಸಹಕರಿಸಿದರು.

ಪ್ರತಿ ವರ್ಷ ಶಿವರಾತ್ರಿ ಹಬ್ಬದ ದಿನ ಅಗಡಿ ಇಂಜನೀಯರಿಂಗ್ ಕಾಲೇಜಿನ ನೂರಾರು ವಿದ್ಯಾರ್ಥಿಗಳು ಸ್ವಯಂ ಪ್ರೇರಣೆ ಮತ್ತು ಭಕ್ತಿಯಿಂದ ಕ್ಷೇತ್ರದಲ್ಲಿನ ಸಾವಿರಾರು ಶಿವಲಿಂಗಗಳಿಗೆ ಜಲಪ್ರೋಕ್ಷಣೆ ಮಾಡಿ ಅಲಂಕರಿಸುವ ಮೂಲಕ ಶಿವರಾತ್ರಿ ಜಾತ್ರಾಮಹೋತ್ಸವಕ್ಕೆ ಜೀವಕಳೆ ನೀಡುತ್ತಿರುವುದು ನಮಗೆ ಸಂತಸ ತಂದಿದೆ ಎನ್ನುತ್ತಾರೆ ಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲ ರೇಣುಕ ಶ್ರೀಗಳು.

ಅಧಿಕಾರಿಗಳಿಂದ ಸಮಾವೇಶ ಸ್ಥಳ ಪರೀಶೀಲನೆ

▶▶ ಮೊದಲನೇ ಪುಟದಿಂದ

ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಭದ್ರತೆಯ ದೃಷ್ಟಿಯಿಂದ ಪಾರ್ಕಿಂಗ್ ವ್ಯವಸ್ಥೆ ಸೇರಿದಂತೆ ಯಾವುದೇ ಸಮಸ್ಯೆಯಾಗದಂತೆ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಹೇಳಿದರು.

ಸರಕಾರದ ಮಹತ್ವಾಕಾಂಕ್ಷಿ ಯೋಜನೆಗಳ ಫಲಾನುಭವಿಗಳ ಈ ಸಮಾವೇಶವನ್ನು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಉದ್ಘಾಟಿಸಲಿದ್ದಾರೆ. ಸಭೆಯ ಅಧ್ಯಕ್ಷತೆಯನ್ನು ಶಾಸಕ ಡಾ.ಚಂದ್ರು ಲಮಾಣಿ ವಹಿಸಲಿದ್ದಾರೆ. ಅನೇಕ ಸಚಿವರು, ವಿಧಾನಪರಿಷತ್ ಸದಸ್ಯರು, ಸಂಸದರು ಆಗಮಿಸಲಿದ್ದು, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ತಾ.ಪಂ. ಆಡಳಿ

ಶ್ರೀಗುರು ರಾಘವೇಂದ್ರ ಸ್ವಾಮಿಗಳ ಪಟ್ಟಾಭಿಷೇಕ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಾತಲಗೇರಿ ರಸ್ತೆಯಲ್ಲಿರುವ ಕರಿಯಮ್ಮ ಕಲ್ಲು ಬಡಾವಣೆಯ ಶ್ರೀಗುರು ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಮಾ. 12ರಂದು ಮಂತ್ರಾಲಯ ಪ್ರಭು ಶ್ರೀಗುರು ರಾಘವೇಂದ್ರ ಮಹಾಸ್ವಾಮಿಗಳವರ ಪಟ್ಟಾಭಿಷೇಕ ಮಹೋತ್ಸವ ಸಮಾರಂಭದ ಪ್ರಯುಕ್ತ ವಿಶೇಷ ಪೂಜಾ ಕೈಂಕರ್ಯಗಳು ನಡೆಯಲಿದ್ದು, ಸಂಜೆ 6.30ಕ್ಕೆ ಶ್ರೀ ರಾಘವೇಂದ್ರ ಕಲಾ ಬಳಗದವರಿಂದ 'ದಶರಥ ನಂದನ ಶ್ರೀರಾಮ' ಎಂಬ ಸಂಗೀತ ರೂಪಕ(ನಾಟಕ) ಪ್ರಯೋಗ ಹಮ್ಮಿಕೊಳ್ಳಲಾಗಿದೆ.

ಸಂಗೀತ ರೂಪಕವನ್ನು ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಅವರು ರಚಿಸಿ ನಿರ್ದೇಶಿಸಿದ್ದಾರೆ. ಆರ್.ಎನ್.ಕೆ ಮಿತ್ರ ಮಂಡಳಿ ಸಹಕಾರದಲ್ಲಿ ಪ್ರಯೋಗವಾಗಲಿರುವ ರೂಪಕದಲ್ಲಿ ಶ್ರೀರಾಮ-ಮೌನೇಶ ಸಿ.ಬಡಿಗೇರ(ನರೇಗಲ್ಲ), ಲಕ್ಷ್ಮಣ-ಉಜ್ವಲ್ ಕಬಾಡಿ, ಭರತ-ಮನೋಜ್ ಕುಲಕರ್ಣಿ, ಸೀತೆ-ಅಂಕಿತಾ ಬೊಮ್ಮಣಗಿ, ದಶರಥ-ಅಂದಾನೆಪ್ಪ ವಿಭೂತಿ, ವಿಶ್ವಾಮಿತ್ರ-ಪ್ರೊ. ಎಮ್.ಎಸ್. ಕುಲಕರ್ಣಿ, ಕೈಕೇಯಿ-ಯಶೋಧಾ ಗುಮಾಸ್ತೆ, ಮಂಥರೆ-ರಕ್ಷಿತಾ ಕುಲಕರ್ಣಿ, ಅಹಲ್ಯೆ-ಕೀರ್ತಿ ಗುಮಾಸ್ತೆ, ಶೂರ್ಪನಖಿ- ಅನಘಾ ಕುಲಕರ್ಣಿ, ರಾವಣ-ವಿಶ್ವನಾಥ ಬೇಂದ್ರೆ, ಶಬರಿ-ಸುರಭಿ ಮಹಾಶಬ್ಧಿ, ವೇದವತಿ-ರಂಜಿತಾ ಕುಲಕರ್ಣಿ, ಅಗ್ನಿದೇವ-ಶ್ವೇತಾ ಸುರೇಬಾನ, ವಿಭಿಷಣ-ಅಮರೇಶ ರಾಮಪೂರ, ಮಾರೀಚ-ಪ್ರೊ. ಹೇಮಂತ ದಳವಾಯಿ, ಬಾಲರಾಮ-ಪೂರ್ಣಪ್ರಜ್ಞ ದೇಶಪಾಂಡೆ, ಬಾಲಲಕ್ಷ್ಮಣ-ಪ್ರಭುಗೌಡ, ಲವ- ಆರಾಧ್ಯ, ಕುಶ-ಅನನ್ಯ, ಹನುಮಂತ-ಶರಾವತಿ ಸುತಾರ ಹಾಗೂ ಅಯೋಧ್ಯೆಯ ಶ್ರೀರಾಮನಾಗಿ ಶುಭಾಂಗಿ ದ್ಯಾಮೇನಹಳ್ಳಿ ಅಭಿನಯಿಸಲಿದ್ದಾರೆ.

ನಾಟಕ ಪ್ರಯೋಗ ನಂತರ ಮಹಾಮಂಗಲಾರತಿ ಫಲ ಮಂತ್ರಾಕ್ಷತೆ ವಿತರಣೆ ನಡೆಯಲಿದೆ. ಈ ಎಲ್ಲ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಶ್ರೀಹರಿ ವಾಯು ಹಾಗೂ ರಾಯರ ಅನುಗ್ರಹಕ್ಕೆ ಪಾತ್ರರಾಗಬೇಕೆಂದು ಸೇವಾ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರು ವಿನಂತಿಸಿದ್ದಾರೆ.

ಬಾವಿಯಲ್ಲಿ ಪತ್ತೆಯಾದ ಶಿವಲಿಂಗ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಇಲ್ಲಿನ ಕಮ್ಮತ್ತಹಳ್ಳಿ ಗ್ರಾಮದ ಪುರಾತನ ಬಾವಿ ಪುನಶ್ಚೇತನಗೊಳಿಸಿ ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ದೇವರ ಕೇಲುಗಳು, ಶಿವಲಿಂಗ, ಬಸವಣ್ಣ ಮೂರ್ತಿಗಳು ಪತ್ತೆಯಾಗಿವೆ. ಬಾವಿಯ ತಳಭಾಗದ ಗೋಡೆಯ ಪೂರ್ವ ಅಭಿಮುಖವಾಗಿ ಮೂರು ದೇವರ ಕೇಲುಗಳು, ಸುಮಾರು ಒಂದು ಅಡಿ ಎತ್ತರದ ಏಕಶಿಲಾ ಶಿವಲಿಂಗ ಹಾಗೂ ಹಲವು ಬಸವಣ್ಣ ಮೂರ್ತಿಗಳು ದೊರತಿದೆ.

ಮಡಿಕೆಗಳನ್ನು (ಕೇಲು) ಮುಚ್ಚಲಾಗಿದ್ದು, ಒಳಗಡೆ ಏನಿದೆ ಎಂಬುದು ತಿಳಿದಿಲ್ಲ. ಹೂಳು ಹೊರ ತೆಗೆಯುವ ಸಂದರ್ಭದಲ್ಲಿ ಕಾರ್ಮಿಕರ ಕಣ್ಣಿಗೆ ಬಿದ್ದಿದ್ದು, ಅಚ್ಚರಿ ಮೂಡಿಸಿದೆ. ಸುಮಾರು 500 ವರ್ಷಗಳ ಹಳೆಯ ಬಾವಿ ಇದಾಗಿದ್ದು, ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಪುಣಭಗಟ್ಟ ಗ್ರಾ.ಪಂ ವತಿಯಿಂದ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಪುನಶ್ಚೇತನ ಕಾಮಗಾರಿ ಕೈಗೊಳ್ಳಲಾಗಿತ್ತು.

ಕ್ರಿ.ಶ 1784ರ ಸಮಯದಲ್ಲಿ ಹರಪನಹಳ್ಳಿ-ಉಚ್ಚಂಗಿದುರ್ಗವನ್ನು ಚಿತ್ರದುರ್ಗದ ಮೂಲ ಪುರುಷ ಚಿತ್ರನಾಯಕ, ಹರಪನಹಳ್ಳಿ ಸೋಮಶೇಖರ ಆಳ್ವಿಕೆ ನಡೆಸಿದ್ದಾರೆ. ವ್ಯವಸಾಯಕ್ಕೆ ಯೋಗ್ಯವಾದ ಭೂಮಿಯನ್ನು ರೈತರಿಗೆ ಕಮ್ಮತ್ತದಿಂದ ನೀಡಿದ್ದರು. ರೈತರ ಉಪಯೋಗಕ್ಕೆ ಬಾವಿಯನ್ನು ಕೊರೆಯಿಸಲಾಗಿದೆ. ಅಂದಿನ ಕಮ್ಮತ್ತವು ಇಂದು ಕಮ್ಮತ್ತಹಳ್ಳಿ ಆಗಿದೆ.

ಓಂಕಾರೇಶ್ವರ ಶ್ರೀಮಠದಲ್ಲಿ ಶಿವರಾತ್ರಿ ದಶಮಾನೋತ್ಸವ, ಫಕ್ಕೀರೇಶ್ವರ ಶ್ರೀಗಳ ಶಷ್ಟ್ಯಬ್ಧಿಪೂರ್ತಿ ಸಮಾರಂಭ

ಫಕ್ಕೀರೇಶ್ವರ ಶಿವಾಚಾರ್ಯರರ ಸಾಧನೆ ಅಸಾಮಾನ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಯಾರೂ ಬರದಿರುವ ಗುಡ್ಡಗಾಡು ಜಾಗದಲ್ಲಿ ಓಂಕಾರಗಿರಿ ಓಂಕಾರೇಶ್ವರ ಮಠದ ಫಕ್ಕಿರೇಶ್ವರ ಶ್ರೀಗಳು ಭಕ್ತರು ಹರಿದು ಬರುವಂತೆ ಮಾಡಿರುವುದು ಸಾಮಾನ್ಯ ಕೆಲಸವಲ್ಲ ಎಂದು ಹರ್ಲಾಪೂರ ಕೊಟ್ಟೂರೇಶ್ವರ ಶ್ರೀಮಠದ ಪೂಜ್ಯಶ್ರೀ ಡಾ. ಅಭಿನವ ಕೊಟ್ಟೂರೇಶ್ವರ ಶ್ರೀಗಳು ಹೇಳಿದರು.

ಅವರು ಇಲ್ಲಿನ ಆದಿತ್ಯ ನಗರದಲ್ಲಿರುವ ಓಂಕಾರೇಶ್ವರ ಶ್ರೀಮಠದಲ್ಲಿ ಶಿವರಾತ್ರಿ ದಶಮಾನೋತ್ಸವ ಹಾಗೂ ಪೂಜ್ಯಶ್ರೀ ಫಕ್ಕೀರೇಶ್ವರ ಶ್ರೀಗಳ ಶಷ್ಟ್ಯಬ್ದಿಪೂರ್ತಿ ಸಮಾರಂಭದ ಅಂಗವಾಗಿ 60 ಬಿಲ್ವಪತ್ರಿ ಸಸಿಗಳ ವಿತರಣೆ, 60 ಸಾಧಕರಿಗೆ, ಸದ್ಭಕ್ತರಿಗೆ ಸನ್ಮಾನ, 'ಓಂಕಾರಶ್ರೀ' ಪ್ರಶಸ್ತಿ ಪ್ರದಾನ ಹಾಗೂ ಗ್ರಂಥಗಳ ಬಿಡುಗಡೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಏನೂ ಇಲ್ಲದೆ ಕೊಂಪೆಯಾಗಿದ್ದ ಈ ಗುಡ್ಡದ ಜಾಗದಲ್ಲಿ ಹಂಪೆಯನ್ನು ನಿರ್ಮಾಣ ಮಾಡಿ ಬರುವ ಭಕ್ತರಿಗೆ ಸದಾಕಾಲ ಶಾಸ್ತ್ರ, ಶಿವಾನುಭವ ಹಾಗೂ ಧರ್ಮಜಾಗೃತಿ ಮೂಡಿಸುತ್ತಿರುವ ಫಕ್ಕೀರೇಶ್ವರ ಶಿವಾಚಾರ್ಯರರ ಸಾಧನೆ ಅಸಾಮಾನ್ಯವಾಗಿದೆ. ಅನೇಕ ಯುವ ಯತಿಗಳಿಗೆ ಮಾರ್ಗದರ್ಶಕರಾಗುವ ಮೂಲಕ ನಾಡು ಕಂಡ ಅಪರೂಪದ ಸ್ವಾಮೀಜಿಗಳಾಗಿದ್ದಾರೆ ಎಂದು ಕೊಟ್ಟೂರೇಶ್ವರ ಶ್ರೀಗಳು ಹೇಳಿದರು.

ಇದೇ ಸಂದರ್ಭದಲ್ಲಿ ಶಿವಲಿಂಗಯ್ಯಶಾಸ್ತ್ರಿಗಳು ಹಿರೇಮಠ ಸಿದ್ದಾಪೂರ ಅವರಿಗೆ 'ಓಂಕಾರಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಯಿತು. ನಿವೃತ್ತ ಉಪನ್ಯಾಸಕ ಅನಿಲ್ ವೈದ್ಯ ಬದುಕಿನಲ್ಲಿ ಹಾಸ್ಯದ ಕುರಿತು ಮಾತನಾಡಿ, ಇಂದಿನ ಒತ್ತಡದ ಜೀವನದಲ್ಲಿ ನಾವು ನಗುವದನ್ನೇ ಮರೆತುಬಿಟ್ಟಿದ್ದೆವೆ. ದೊಡ್ಡ ದೊಡ್ಡ ನಗರದಲ್ಲಿ ನಗುವದಕ್ಕಾಗಿಯೇ ಹಣ ಕೊಡಬೇಕಾಗಿದೆ. ಹೆಚ್ಚು ನಗುವದರಿಂದ ಆರೋಗ್ಯ ಉತ್ತಮವಾಗಿರುತ್ತದೆ. ಸುತ್ತಮುತ್ತಲಿನ ಜನರೊಂದಿಗೆ ಬೆರೆತು ನಗುನಗುತಾ ಕಾಲ ಕಳೆಯಬೇಕೆಂದು ಹೇಳಿದರು.

ಫಕ್ಕೀರೇಶ್ವರ ಶ್ರೀಗಳು ಸ್ವರಚಿತ 'ಅರಿವಿನ ಅಂತರಾಳ' ಗ್ರಂಥವನ್ನು ಪಾರ್ವತಿದೇವಿ ಶಾಬಾದಿಮಠ ಅವರಿಂದ, 'ಜ್ಞಾನಕಲ್ಪ' ಹಾಗೂ 'ಸುಚಿಂತನ' ದ್ವಿತೀಯ ಮುದ್ರಣದ ಕಿರು ಗ್ರಂಥವನ್ನು ಪ್ರಸನ್ನರೇಣುಕಸ್ವಾಮಿ ಶಾಬಾದಿಮಠ ಅವರಿಂದ ಹಾಗೂ ಡಾ. ರಾಜೇಂದ್ರ ಗಡಾದ ವಿರಚಿತ 'ಜನಸಾಮಾನ್ಯರ ಸ್ವಾಮೀಜಿ' ಶ್ರೀ ಫಕ್ಕೀರೇಶ್ವರ ಶ್ರೀಗಳ ಕುರಿತು ಗ್ರಂಥದ ಮುಖಪುಟವನ್ನು ಬಿಡುಗಡೆ ಮಾಡಲಾಯಿತು.

ವೇದಿಕೆ ಮೇಲೆ ಹಿರೇವಡ್ಡಟ್ಟಿ ಹಿರೇಮಠದ ಪೂಜ್ಯಶ್ರೀ ವೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಕದಡಿ ನೀಲಮ್ಮ ತಾಯಿ ಶ್ರೀಮಠದ ಪೂಜ್ಯಶ್ರೀ ಮಹಾದೇವ ಸ್ವಾಮಿಗಳು, ಸಂಭಾಪೂರ ವೀರಮ್ಮತಾಯಿ ಆಶ್ರಮದ ಮಾತೋಶ್ರೀ ಅಭಿನವ ರುದ್ರಮ್ಮ ತಾಯಿ, ಕೊಡಗಾನೂರದ ಚಂದ್ರಶೇಖರ ಶರಣರು ಹಿರೇಮಠ, ಗದುಗಿನ ಅಡವೀಂದ್ರಸ್ವಾಮಿ ಮಠದ ಪೂಜ್ಯಶ್ರೀ ಮಹೇಶ್ವರ ಸ್ವಾಮೀಜಿ ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಮಹಿಳಾ ರುದ್ರ ಬಳಗದ ತಾಯಂದಿರು ವೇದಘೋಷ ಮಾಡಿದರು. ಸಂಗೀತ ಬಳಗದಿಂದ ಪ್ರಾರ್ಥನೆ ಮಾಡಲಾಯಿತು. ಶಿಕ್ಷಕ ಬಿ.ಬಿ. ಹಾವಣಗಿ ಸ್ವಾಗತಿಸಿದರು. ಪತ್ರಕರ್ತ ಆನಂದಯ್ಯ ವೀರಕ್ತಮಠ ಶಿವರಾತ್ರಿ ಸಂದೇಶ ನುಡಿದರು.

ಚೇತನ ಕರಾಟೆ ಕ್ಲಬ್ ಬಳಗದವರಿಂದ ಕರಾಟೆ ಪ್ರದರ್ಶನ, ಧರಣಿ ಕದಡಿ ಅವರಿಂದ ಬ್ರೈಟರ್ ಮೈಂಡ್ ಪ್ರದರ್ಶನ ಜರುಗಿತು. ಸಾಹಿತಿ ಕೆ.ಎ. ಬಳಿಗೇರ ಕಾರ್ಯಕ್ರಮ ನಿರೂಪಿಸಿದರು. ಸೊರಟೂರಿನ ಹಳಿಕೆಮ್ಮದೇವಿ ರಾತ್ರಿಶಾಲೆಯ ಬಾಲಕಿಯರಿಂದ ಕೋಲಾಟ ನೃತ್ಯ ಹಾಗೂ ಕನ್ನಡ ದೀಪೋತ್ಸವ ಕಾರ್ಯಕ್ರಮ ಜರುಗಿ-ತು. ಶಿವಲಿಂಗಯ್ಯಶಾಸ್ತ್ರಿಗಳು ಹಿರೇಮಠ ಸಿದ್ದಾಪೂರ ಹಾಗೂ ಸೊರಟೂರಿನ ಬಸವರಾಜ ಶೆಲಿಯಪ್ಪನವರ ಕಾರ್ಯಕ್ರಮ ನಿರೂಪಿಸಿದರು.

ಈ ಸಂದರ್ಭದಲ್ಲಿ ಭದ್ರಾಪೂರದ ಇಸ್ಲಾಂ ಸಮುದಾಯದ ದಾದಾಪೀರ ಕುಟುಂಬ, ದ್ರಾಕ್ಷಾಯಣಿ ಹೂಗಾರ ಕುಟುಂಬ, ಹೊಳೆಆಲೂರಿನ ಗೌರಿಮಠ ಕುಟುಂಬ, ಗುಜವಾಗಡಿಯ ತಿಪ್ಪನಗೌಡ ಪಾಟೀಲ ಕುಟುಂಬ, ಗದುಗಿನ ಜಯಮ್ಮ ಕುಟುಂಬ, ಶರಣಯ್ಯ ಹಡಗಲಿಮಠ ಕುಟುಂಬ, ಪಾರ್ವತಿದೇವಿ ಕುಟುಂಬ, ಬಳ್ಳಾರಿಯ ಸಿದ್ದರಾಮಯ್ಯ ಮಠದ ಅವರ ಕುಟುಂಬದವರು ಪಕ್ಕೀರೇಶ್ವರ ಶ್ರೀಗಳಿಗೆ ತುಲಾಭಾರ ಸೇವೆ ನೆರವೇರಿಸಿದರು.

ಡಾ. ಭಾರ್ಗವರಿಗೆ ಪಿಎಚ್‌ಡಿ ಪದವಿ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಗ್ರಾಮದ ಲಾಸ್ಟ್ ಪಂಚ್ ಖ್ಯಾತಿಯ ಬರಹಗಾರ ಹಾಗೂ ಬೆಂಗಳೂರಿನ ಬೈಟ್ಸ್ ಕಂಪನಿಯ ಪ್ರೋಗ್ರಾಮ್ ಲೀಡ್ ಡಾ. ಭಾರ್ಗವ ಎಚ್.ಕೆ ಅವರು ಮಂಡಿಸಿದ 'ರೆಕಗ್ನಿಶನ್ ಅಂಡ್ ಕರೆಕ್ಷನ್ ಆಫ್ ಕನ್ನಡ ಹ್ಯಾಂಡ್ ರಿಟನ್ ಡಾಕ್ಯುಮೆಂಟ್ಸ್ ವಿತ್ ಸ್ಟ್ರೈಕ್ ಔಟ್ಸ್ ಅಂಡ್ ಅನ್ಯೋಟೇಶನ್ಸ್' ಎಂಬ ಪ್ರಬಂಧಕ್ಕೆ ಬೆಳಗಾವಿಯ ಪ್ರತಿಷ್ಠಿತ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ಪಿಎಚ್‌ಡಿ ಪದವಿ ಪಡೆದುಕೊಂಡಿದ್ದಾರೆ.

ಇವರಿಗೆ ಡಾ.ಶಿವಯೋಗಿ ಬಿ.ಯು ಮಾರ್ಗದರ್ಶಕರಾಗಿದ್ದರು. ಲಕ್ಷ್ಮೇಶ್ವರದ ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ 12 ವರ್ಷಗಳ ಕಾಲ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದಾರೆ.

ಗ್ರಾಮದ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಈ ಬಗ್ಗೆ ಸಂತಸ ವ್ಯಕ್ತಪಡಿಸಿ, ಭಾರ್ಗವ ಅವರು ನಮ್ಮ ಸಹಪಾಠಿ, ಶಾಲಾ ಕಾಲೇಜು ದಿನಗಳಲ್ಲಿ ಪ್ರತಿಭಾವಂತ ವ್ಯಕ್ತಿಯಾಗಿದ್ದರು. ತಿಮ್ಮಾಪೂರ ಗ್ರಾಮವು ಪ್ರತಿಭಾವಂತ ಹಾಗೂ ಆರ್ಥಿಕವಾಗಿ ಸದೃಢವಾಗಿರುವ ಗ್ರಾಮ. ಗದಗ ಜಿಲ್ಲೆಯಲ್ಲೇ ವರ್ಚಸ್ಸು ಪಡೆದ ಗ್ರಾಮವೆಂದು ಹೇಳಲು ಹೆಮ್ಮೆಯಾಗುತ್ತದೆ ಎಂದು ಹೇಳಿದರು.

ಭಾರ್ಗವ ಕೆ.ಎಚ್. ಅವರಿಗೆ ಸ್ನೇಹಿತರಾದ ಜಗದೀಶ, ಶ್ರೀಕಾಂತ ಕಟಗಿ, ಕುಬೇರಪ್ಪ ಜೋಗಿನ, ಹಾಲಪ್ಪ ಗದಗ, ಇಸ್ಮಾಯಿಲ್ ನದಾಫ, ರವಿ ಗುಡ್ಲಾನೂರ, ನಿಂಗಪ್ಪ ಗುಡ್ಲಾನೂರ ಸೇರಿದಂತೆ ಗ್ರಾಮಸ್ಥರು ಅಭಿನಂದಿಸಿದ್ದಾರೆ.

ಶ್ರೀ ಕರಿಯಮ್ಮದೇವಿ ಮಹಿಳಾ ಮಂಡಳದಿಂದ ಮಹಿಳಾ ದಿನಾಚರಣೆ

ಮಹಿಳೆಯರು ಆರೋಗ್ಯದ ಕಡೆಗೆ ಗಮನ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆ ತನ್ನ ಕುಟುಂಬದ ನಿರ್ವಹಣೆಯಲ್ಲಿ ತನ್ನ ವೈಯಕ್ತಿಕ ಆರೋಗ್ಯದ ಕಡೆಗೆ ನಿರ್ಲಕ್ಷ ವಹಿಸುತ್ತಾಳೆ. ಇದರಿಂದ ಆಕೆ ಮುಂಬರುವ ದಿನಗಳಲ್ಲಿ ಅನೇಕ ರೋಗಗಳಿಗೆ ತುತ್ತಾಗುತ್ತಾಳೆ. ಆದ್ದರಿಂದ ಮಹಿಳೆ ತನ್ನ ಆರೋಗ್ಯದ ಕಡೆಗೆ ಗಮನಹರಿಸಿದಲ್ಲಿ ತನ್ನ ಕುಟುಂಬವೂ ಸ್ವಾಸ್ಥ್ಯದಿಂದಿರಲು ಸಾಧ್ಯ ಎಂದು ಡಾ. ತೇಜಸ್ವಿನಿ ಹಿರೇಮಠ ಹೇಳಿದರು.

ನಗರದ ಶ್ರೀ ಕರಿಯಮ್ಮದೇವಿ ಮಹಿಳಾ ಮಂಡಳವು ಆಚರಿಸಿದ ಅಂತಾರಾರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿ, ಮಹಿಳೆ ಸ್ವಾಭಿಮಾನದಿಂದ ಬದುಕಬೇಕು ಹಾಗೂ ತನ್ನ ಆರೋಗ್ಯದ ಕಡೆಗೆ ವಿಶೇಷ ಗಮನಹರಿಸಬೇಕು ಎಂದು ತಿಳಿಸಿ, ಆರೋಗ್ಯ ಸಲಹೆಗಳನ್ನು ಮತ್ತು ಈಗಿನ ಮುಂದುವರೆದ ವೈದ್ಯಕೀಯ ಚಿಕಿತ್ಸೆಗಳ ಬಗ್ಗೆ ವಿವರಿಸಿದರು.

ಅನಿತಾ ಜಕಬಾಳ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭೆಯ ಅಧ್ಯಕ್ಷತೆ ವಹಿಸಿದ್ದ ರೇಣುಕಾ ಕೇಸರಿ ಸಾಧನೆಗೈದ ಡಾ. ಸಂಗೀತ ಹುಡೇದ, ಡಾ. ಅನುಶ್ರೀ ಕಳ್ಳಿ ಹಾಗೂ ಸಂಜನಾ ಭಗವತಿ ಅವರನ್ನು ಸನ್ಮಾನಿಸಿ, ಸಂಘದ ಸದಸ್ಯರ ಸಹಕಾರವು ಸಂಘದ ಯಶಸ್ವಿಗೆ ಮತ್ತಷ್ಟು ಬಲವನ್ನು ತಂದಿದೆ ಎಂದರು.

ವಿಜಯಲಕ್ಷ್ಮೀ ಭಗವತಿಯವರ ನೇತೃತ್ವದಲ್ಲಿ ಮಹಿಳೆಯರು ಫ್ಯಾಶನ್ ಶೋ ಮಾಡಿದರು. ಅಕ್ಕಮಹಾದೇವಿ ಕಳ್ಳಿ ಕೊರವಂಜಿ ಪಾತ್ರವನ್ನು ನಿರ್ವಹಿಸಿದರು. ಶಾಂತಾ ಗೌಡರ ಹಾಗೂ ಗಂಗವ್ವ ನರ್ತಿಯವರು ವೀರ ಮಹಿಳೆಯರ ಪಾತ್ರ ನಿರ್ವಹಿಸಿದರು.

ಶಿವಲೀಲಾ ಅಡವಿ ಪ್ರಾರ್ಥಿಸಿದರು. ಪದ್ಮಾವತಿ ವಾಲಿಕಾರ ಅತಿಥಿಗಳನ್ನು ಪರಿಚಯಿಸಿ ಸ್ವಾಗತಿಸಿದರು. ಶ್ರೀದೇವಿ ಗುಡ್ಲಾನೂರ ಪುಷ್ಪಾರ್ಪಣೆಗೈದರು. ಅನ್ನಪೂರ್ಣಾ ಹುಳ್ಳಿ ಹಾಗೂ ಸುರೇಖಾ ಕುರಿ ಅನಿಸಿಕೆಗಳನ್ನು ಹಂಚಿಕೊಂಡರು. ಗಂಗಾ ಚಕ್ರಣ್ಣವರ ಹಾಗೂ ಅನ್ನಪೂರ್ಣ ದೇವರವರ ಹಾಡುಗಳನ್ನು ಪ್ರಸ್ತುತಪಡಿಸಿದರು. ಶೀಲಾ ಹೆಬಸೂರ ಕಾರ್ಯಕ್ರಮ ನಿರೂಪಿಸಿದರು. ನೇತ್ರಾವತಿ ಕೊಪ್ಪಳನ್ನವರ ವಂದಿಸಿದರು. ಶಶಿಕಲಾ ಗುರಿಕಾರ, ಜಯಲಕ್ಷ್ಮಿ ಡೊಳ್ಳಿನವರು ಅಲ್ಪೋಪಹಾರದ ವ್ಯವಸ್ಥೆಯನ್ನು ಮಾಡಿದರು.

ವಿದ್ಯೆಗೆ ವಿನಯವೇ ಭೂಷಣ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ನಿಮ್ಮ ಬದುಕಿಗೆ ದಾರಿದೀಪವಾದ ತಂದೆ-ತಾಯಿ, ವಿದ್ಯಾಭ್ಯಾಸ ಕಲಿಸಿದ ಗುರುಗಳು ಮತ್ತು ಕಲಿತ ಶಾಲೆಯನ್ನೆಂದಿಗೂ ನೀವು ಮರೆಯಬೇಡಿ. ಈ ಮೂರನ್ನೂ ಮರೆತರೆ ನಿಮಗೆ ನೀವೇ ದ್ರೋಹ ಮಾಡಿಕೊಂಡಂತೆ ಎಂದು ಸಾಹಿತಿ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಹೇಳಿದರು.

ಇಲ್ಲಿಯ ಜನತಾ ವಿದ್ಯಾವರ್ಧಕ ಸಂಸ್ಥೆಯ ಬಾ.ಹೊ. ಪಾಟೀಲ ಪ್ರೌಢಶಾಲೆಯಲ್ಲಿ ಏರ್ಪಡಿಸಲಾಗಿದ್ದ ಮಹಾಸರಸ್ವತಿ ಪೂಜೆ ಹಾಗೂ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ವಿದ್ಯೆಗೆ ವಿನಯವೇ ಭೂಷಣ. ವಿನಯಕ್ಕೆ ಸಂಸ್ಕಾರವೇ ಭೂಷಣ. ನೀವು ಒಂದಕ್ಷರವನ್ನು ಕಡಿಮೆ ಕಲಿತರೂ ಚಿಂತೆಯಿಲ್ಲ, ಸಂಸ್ಕಾರವಂತರಾಗಿ ಈ ಸಮಾಜದ ಆಸ್ತಿಯಾಗಬೇಕು ಎಂದರು.

ಸಂಸ್ಥೆಯ ನಿರ್ದೇಶಕ ವೀರಯ್ಯ ಗಂಧದ ಮಾತನಾಡಿ, ವಿದ್ಯಾರ್ಥಿಗಳು ಶಿಸ್ತು, ಸಮಯ ಪಾಲನೆಯ ಕಡೆಗೆ ಹೆಚ್ಚಿನ ಮಹತ್ವವನ್ನು ನೀಡಬೇಕು. ಯಾವುದೇ ಕಾರಣಕ್ಕೂ ನಕಲಿಗೆ ಅಕಲು ಮಾಡಬೇಡಿ. ಇಂದು ನೀವು ಪೂಜಿಸಿದ ಮಹಾಸರಸ್ವತಿ ಎಲ್ಲ ಭಾಗ್ಯವನ್ನೂ ನಿಮಗೆ ನೀಡಲಿ ಎಂದು ಆಶಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಐ.ಎನ್. ಕುಂಬಾರ, ಶಿಕ್ಷಕ ಬಿ.ಎಸ್. ಕಣವಿ ಮಾತನಾಡಿದರು. ಮಾತನಾಡಿದರು. ವೇದಿಕೆಯ ಮೇಲೆ ಸಂಸ್ಥೆಯ ನಿರ್ದೇಶಕರಾದ ಟಿ.ಎನ್. ಅಂಬಕ್ಕಿ, ಕೆ.ಎಂ. ಪಾಟೀಲ ಉಪಸ್ಥಿತರಿದ್ದರು. ಹಿರಿಯ ಶಿಕ್ಷಕ ಎ.ಎನ್. ಪೂಜಾರ ಸ್ವಾಗತಿಸಿದರು. ಗೌರವ ಶಿಕ್ಷಕ ದಾದಾಪೀರ ಕಿತ್ತೂರ ನಿರೂಪಿಸಿದರು. ಪಿ.ಎಸ್. ಕೊರಡೂರ ವಂದಿಸಿದರು.

ಶಿರಹಟ್ಟಿ ತಾಲೂಕಿನಾದ್ಯಂತ ಸರಕಾರಿ ಹಳ್ಳ-ಕೊಳ್ಳಗಳಲ್ಲಿ, ನದಿ ಪಾತ್ರದಲ್ಲಿ ಅಕ್ರಮ ಮರಳು ಸಾಗಾಣಿಕೆ

ಮರಳುಗಳ್ಳರಿಗೆ ಲಗಾಮು ಹಾಕುವವರಾರು?

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕು ಅಭಿವೃದ್ಧಿಯಲ್ಲಿ ಹಿಂದುಳಿದಿದ್ದರೂ, ಖನಿಜ ಸಂಪತ್ತಿನಿಂದ ಸಮೃದ್ಧವಾದ ತಾಲೂಕಾಗಿದೆ. ಕೆಲವು ಬಂಡವಾಳಶಾಹಿಗಳು ತಾಲೂಕಿಗೆ ಲಗ್ಗೆಯಿಟ್ಟು ಸರಕಾರದ ನಿ